ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 71 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ: 16–09–2023 ಶನಿವಾರ ಪುಟ: 4 ಬೆಲೆ : ರೂ.2–00
Volume - 01 Issue - 71 Title- Code: KARKAN 28269 Chitradurga Date: 16-09-2023 Saturday Page: 4 Price: Rs. 2-00

ಒಳಪುಟದ ಸುದ್ದಿಗಳು
ಕೇಂದ್ರ ಸರ್ಕಾರದ ಯೋಜನೆಗಳ ಹೆಚ್ಚೆಚ್ಚು ಪ್ರಚಾರದಿಂದ ಬಡಜನರಿಗೆ ಅನುಕೂಲ: ಸಂಸದ 2
ಗೌರವಧನ ಹೆಚ್ಚಳಕ್ಕೆ ಅಂಗನವಾಡಿ ಕಾರ್ಯಕರ್ತೆಯರ ಆಗ್ರಹ 3
ಬರ ನಿವಾರಣೆಗೆ ಸರ್ಕಾರದ ಸಂಕಲ್ಪ: ಸಚಿವ ಸುಧಾಕರ್ 4

ಸುದ್ದಿ, ಜಾಹಿರಾತಿಗೆ
9686622252

## ಫಾಸ್ಟ್ ನ್ಯೂಸ್

### ಗಣೇಶ ಹಬ್ಬದ ಹಿನ್ನೆಲೆ : ಸೆ.15ರಿಂದ 21ರ ತನಕ ಬಸ್ ಪ್ರಯಾಣದಲ್ಲಿ ವ್ಯತ್ಯಯ: ಸಾರ್ವಜನಿಕರ ಸಹಕಾರಕ್ಕೆ ಮನವಿ

» ಚಳ್ಳಕೆರೆ

ನಾಡಿನ ಪ್ರಸಿದ್ದ ಹಬ್ಬಗಳಲ್ಲಿ ಒಂದಾದ ಶ್ರೀಗೌರಿಗಣೇಶ ಹಬ್ಬಕ್ಕೆ ಆಗಮಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಬೆಂಗಳೂರು ನಗರಕ್ಕೆ ಚಳ್ಳಕೆರೆ ಕೆಎಸ್‌ಆರ್‌ಟಿಸಿ ಘಟಕದಿಂದ ಹೆಚ್ಚುವರಿ ಬಸ್‌ಗಳನ್ನು ಪಡೆದ ಹಿನ್ನೆಲೆಯಲ್ಲಿ, ನಗರದ ವ್ಯಾಪ್ತಿ ಮತ್ತು ಗ್ರಾಮೀಣ ಭಾಗಗಳಲ್ಲಿ ಪ್ರಯಾಣಿಕರಿಗೆ ಆಗುವ ತೊಂದರೆಗೆ ಸಂಸ್ಥೆ ವಿಷಾದ ವ್ಯಕ್ತಪಡಿಸಿ ಸಹಕಾರ ನೀಡಬೇಕೆಂದು ಡಿಪೋ ವ್ಯವಸ್ಥಾಪಕ ಪ್ರಭು ಮನವಿ ಮಾಡಿದ್ದಾರೆ.

ಈ ಬಗ್ಗೆ ಪತ್ರಿಕೆಗೆ ಮಾಹಿತಿ ನೀಡಿರುವ ಅವರು, ಬೆಂಗಳೂರು ಕೇಂದ್ರಕ್ಕೆ ಇಲ್ಲಿನ ಬಹುತೇಕ ಬಸ್‌ಗಳು ಕಾರ್ಯಚರಣೆಗಾಗಿ ತೆರಳುತ್ತಿವೆ. ರಾಜ್ಯದ ಸುಮಾರು 31 ಜಿಲ್ಲೆಗಳಿಗೂ ಬೆಂಗಳೂರಿನಿಂದ ಪ್ರಯಾಣಿಕರನ್ನು ಕರೆದ್ಯೊಯುವ ಜವಾಬ್ದಾರಿ ಸಂಸ್ಥೆಯದಾಗಿದೆ. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ಬಸ್‌ಗಳು ಬೆಂಗಳೂರಿಗೆ ಕಡೆಗೆ ಪ್ರಯಾಣಿಸಲಿದ್ದು ಸ್ಥಳೀಯವಾಗಿ ಕೆಲವೊಂದು ರೂಟ್‌ಗಳಲ್ಲಿ ಮಾತ್ರ ಸಾರ್ವಜನಿಕರಿಗೆ ಸೆ.15ರಿಂದ21ರವರೆಗೂ ಬಸ್‌ಗಳ ವ್ಯತ್ಯಯ ಉಂಟಾಗಲಿದ್ದು ಸಹಕರಿಸುವಂತೆ ಮನವಿ ಮಾಡಿದ್ದಾರೆ.

### ಮದ್ಯ ಮಾರಾಟ ಮತ್ತು ಸರಬರಾಜು ನಿಷೇಧ

» ದಾವಣಗೆರೆ

ಸೆಪ್ಟೆಂಬರ್ 18 ರಿಂದ ಗೌರಿ ಗಣೇಶ ಹಬ್ಬ ಮತ್ತು ಸೆಪ್ಟೆಂಬರ್ 28 ರಂದು ಈದ್ ಮಿಲಾದ್ ಹಬ್ಬದ ಪ್ರಯುಕ್ತ ದಾವಣಗೆರೆ ಜಿಲ್ಲೆಯಾದ್ಯಂತ ಮದ್ಯ ಮಾರಾಟ ಹಾಗೂ ಮದ್ಯ ಸರಬರಾಜನ್ನು ನಿಷೇಧಿಸಲು ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಆದೇಶಿಸಿದ್ದಾರೆ. ಜಿಲ್ಲಾದ್ಯಂತ ಗೌರಿ ಗಣೇಶ ಹಬ್ಬ ಮತ್ತು ಈದ್ ಮಿಲಾದ್ ಹಬ್ಬವನ್ನು ಭಕ್ತಿ ಸಡಗರದಿಂದ ಆಚರಿಸಲಾಗುತ್ತಿದ್ದು, ಗಣೇಶ ಪ್ರತಿಷ್ಠಾಪನೆ ಮತ್ತು ವಿಸರ್ಜನೆ ಸಂಬಂಧ ಗಣೇಶ ಮೂರ್ತಿಗಳನ್ನು ಮೆರವಣಿಗೆ ಮುಖಾಂತರ ವಿಸರ್ಜನಾ ಸ್ಥಳಗಳಿಗೆ ತೆಗೆದುಕೊಂಡು ಹೋಗಲಿದ್ದು ಈ ಸಂದರ್ಭದಲ್ಲಿ ಜಿಲ್ಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡುವುದು ಅತೀ ಅವಶ್ಯಕ ಪ್ರಯುಕ್ತ ಸೆ.18 ರಿಂದ 28 ರವರೆಎಗೆ ಜಿಲ್ಲೆಯಾದ್ಯಂತ ಮುಂಜಾಗ್ರತಾ ಕ್ರಮವಾಗಿ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ರವರೆಗೆ ಮದ್ಯ ಮಾರಾಟ ನಿಷೇಧಿಸಿಲಾಗಿದೆ.

### ಸ್ವಚ್ಛತಾ ಹೀ ಸೇವಾ ಆಂದೋಲಕ್ಕೆ ಚಾಲನೆ



ಚಿತ್ರದುರ್ಗ: ಸ್ವಚ್ಛ ಭಾರತ್ ಮಿಷನ್ ಗ್ರಾಮೀಣ ಯೋಜನೆಯಡಿ ಸ್ವಚ್ಛತಾ ಹೀ ಸೇವಾ ಆಂದೋಲನದ ಪ್ರಯುಕ್ತ ಸೆ.15 ರಿಂದ ಅ.2 ರವರೆಗೆ "ರಚಿಡಿಛಚಿರಜ ಜಿಡಿಜಜ ಽಟಿಜುಚಿ" ಹೆಸರಿನಲ್ಲಿ ಗ್ರಾಮ, ತಾಲ್ಲೂಕು, ಜಿಲ್ಲಾ ಮಟ್ಟದಲ್ಲಿ ಸ್ವಚ್ಛತಾ ಶ್ರಮದಾನ ಹಮ್ಮಿಕೊಳ್ಳಲಾಗಿದ್ದು, ಗುರುವಾರ ಚಿತ್ರದುರ್ಗ ತಾಲ್ಲೂಕಿನ ಮೆದೇಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಜಿಲ್ಲಾಮಟ್ಟದ ಕಾರ್ಯಕ್ರಮಕ್ಕೆ ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಎನ್.ಸತೀಶ್ ರೆಡ್ಡಿ ಚಾಲನೆ ನೀಡಿದರು.ಚಿತ್ರದುರ್ಗ ಮೆದೇಹಳ್ಳಿ ರಾಷ್ಟ್ರೀಯ ಹೆದ್ದಾರಿ–4ರ ಸರ್ವಿಸ್ ರಸ್ತೆಯ ಸಮೀಪ ಶ್ರಮದಾನ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ನಂತರ ಅಂಗಡಿಗಳು, ಹೋಟೆಲ್, ವಾಣಿಜ್ಯ ಮಳಿಗೆಗಳಿಗೆ ಭೇಟಿ ನೀಡಿ, ಏಕ ಬಳಕೆ ಪ್ಲಾಸ್ಟಿಕ್ ವಶಪಡಿಸಿಕೊಳ್ಳಲಾಯಿತು. ಹಾಗೂ ಏಕ ಬಳಕೆ ಪ್ಲಾಸ್ಟಿಕ್ ಬಳಸದಂತೆ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ, ತಾಲ್ಲೂಕು ಮಟ್ಟದ ಅಧಿಕಾರಿಗಳು, ಸ್ವಚ್ಛ ಭಾರತ್ ಮಿಷನ್ ಸಮಾಲೋಚಕರು, ಜಲ ಜೀವನ್ ಮಿಷನ್ ಡಿಪಿಎಂ ಇದ್ದರು.

ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯಲ್ಲಿ ಸಚಿವ ಡಿ.ಸುಧಾಕರ್

# ವಿದ್ಯಾರ್ಥಿಗಳಿಗೆ ಸಂವಿಧಾನದ ಅರಿವು ಅಗತ್ಯ

» ಚಿತ್ರದುರ್ಗ





ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ಭಾರತೀಯ ಸಂವಿಧಾನದ ಅರಿವು ಹೆಚ್ಚು ಅಗತ್ಯವಿದೆ ಎಂದು ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ತರಾಸು ರಂಗಮಂದಿರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಹಮ್ಮಿಕೊಂಡಿದ್ದ ಭಾರತ ಸಂವಿಧಾನ ಪೀಠಿಕೆಯ ಜಾಗತಿಕ ವಾಚನ, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.ವಿದ್ಯಾರ್ಥಿಗಳು ಭಾರತದ ಸಂವಿಧಾನವನ್ನು ಸರಿಯಾಗಿ ಅರ್ಥಮಾಡಿಕೊಂಡು, ಹೆಚ್ಚು ತಿಳಿಯುವ ಮೂಲಕ ಸಂವಿಧಾನದ ಬಗ್ಗೆ ಅರಿವು ಹೊಂದಿರಬೇಕು. ಈ ಬಗ್ಗೆ ಹೆಚ್ಚು ಹೆಚ್ಚು ಅಭ್ಯಾಸ ಮಾಡಬೇಕು. ಸಂವಿಧಾನದ ಪೀಠಿಕೆಯನ್ನು ಅರ್ಥೈಸಿಕೊಂಡು, ಪ್ರತಿಯೊಬ್ಬರು ಅನುಸರಿಸಬೇಕು ಎಂದು ತಿಳಿಸಿದರು.ಪ್ರಪಂಚದಲ್ಲಿಯೇ ಅತ್ಯಂತ ದೊಡ್ಡದಾದ ಪ್ರಜಾಪ್ರಭುತ್ವ ಹೊಂದಿದ ಭಾರತ ದೇಶಕ್ಕೆ ಪವಿತ್ರವಾದ ಸಂವಿಧಾನದ ಕೊಟ್ಟಿರುವಂತಹ ಕೀರ್ತಿ ಡಾ.ಬಿ.ಆರ್. ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ. ಸಂವಿಧಾನದ ರಚನೆ ಮಾಡಿರುವಂತಹ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ನಾವೆಲ್ಲರೂ ಸದಾ ಸ್ಮರಿಸಬೇಕು ಎಂದು ಹೇಳಿದರು.

ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ನಾವು ಜೀವನ ನಡೆಸುತ್ತಿದ್ದೇವೆ. ಪ್ರಜಾಪ್ರಭುತ್ವದಲ್ಲಿ ನಮಗೆ ನೀಡಿರುವ ಹಕ್ಕುಗಳು, ಜವಾಬ್ದಾರಿಗಳನ್ನು ತಿಳಿದುಕೊಳ್ಳಲು ಸಂವಿಧಾನದ ಪೀಠಿಕೆಯನ್ನು ಓದುವ ಮೂಲಕ ಸಂವಿಧಾನದ ಕುರಿತು ಹೆಚ್ಚಿನ ಮಾಹಿತಿ ಪಡೆಯಬೇಕು.

ಭಾರತ ದೇಶ ಇಡೀ ವಿಶ್ವದಲ್ಲಿಯೇ ಪ್ರಜಾಪ್ರಭುತ್ವದಲ್ಲಿ ಪ್ರಥಮ ಸ್ಥಾನದಲ್ಲಿರುವ ಅತೀ ದೊಡ್ಡ ಪ್ರಜಾಪ್ರಭುತ್ವ ದೇಶವಾಗಿದೆ. ಇದಕ್ಕೆ ಅಡಿಪಾಯವಾಗಿರುವುದು ನಮ್ಮ ಸಂವಿಧಾನ. ದೇಶದಲ್ಲಿ ಸ್ವತಂತ್ರವಾಗಿ ಬದುಕು ನಡೆಸಲು ಕಾರಣವೇ ಸಂವಿಧಾನ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರು ವಿವಿಧ ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ, ಸಾಕಷ್ಟು ವಿಷಯಗಳ ಬಗ್ಗೆ ತಿಳುವಳಿಕೆಯನ್ನು ಪಡೆದು, ನಮಗೆ ಶ್ರೇಷ್ಟವಾದ ಸಂವಿಧಾನ ನೀಡಿದ್ದಾರೆ ಎಂದರು.ಶಿಕ್ಷಣದಿಂದ ಮಾತ್ರ ಪ್ರಗತಿ ಸಾಧ್ಯ. ಶಿಕ್ಷಣದಿಂದ ಮಾತ್ರ ಜಗತ್ತು ಮತ್ತು ದೇಶವನ್ನು ಬದಲಾವಣೆ ಮಾಡಲು ಸಾಧ್ಯವಿದೆ ಎಂಬುದನ್ನು ಅಂಬೇಡ್ಕರ್ ಅವರು ಮನಗಂಡಿದ್ದರು. 2 ವರ್ಷ 11 ತಿಂಗಳು 18 ದಿನಗಳ ಕಾಲ ರಾತ್ರಿ ಹಗಲು ಶ್ರಮವಹಿಸಿ ಸಂವಿಧಾನ ರಚನೆ ಮಾಡಿದ್ದಾರೆ. ಸಂವಿಧಾನದಲ್ಲಿ 400ಕ್ಕೂ ಹೆಚ್ಚು ಆರ್ಟಿಕಲ್ಸ್, 25 ಭಾಗಗಳು, 12 ಷೆಡ್ಯೂಲ್‌ಗಳು ಇವೆ. ಇವೆಲ್ಲವೂ 77 ವರ್ಷ ಆದ ನಂತರವೂ ಕಾಲಕಾಲಕ್ಕೆ ಬೇಕಾದ ಬದಲಾವಣೆ ಮಾಡಲು ಕೂಡ ಸಂವಿಧಾನದಲ್ಲಿ ಅವಕಾಶ ಕಲ್ಪಿಸಿದ್ದಾರೆ. ಅಂಬೇಡ್ಕರ್ ಅವರು ಕೆನಡಾ, ಐರಿಷ್, ಆಸ್ಟ್ರೇಲಿಯಾ, ಬ್ರಿಟನ್ ಸೇರಿದಂತೆ ಈ ಎಲ್ಲಾ ದೇಶಗಳ ಸಂವಿಧಾನದ ಬಗ್ಗೆ ಕೂಲಂಕಷವಾಗಿ ಅಧ್ಯಯನ ಮಾಡಿ ನಮ್ಮ ದೇಶಕ್ಕೆ ಅವಶ್ಯಕವಿರುವ ಅಂಶಗಳ ಕುರಿತು ಸಂಪೂರ್ಣವಾಗಿ ವಿಶ್ಲೇಷಣೆ ಮಾಡಿದ್ದಾರೆ. ಅಂಬೇಡ್ಕರ್ ನೀಡಿರುವ ಭಾರತ ಸಂವಿಧಾನ ನಮ್ಮೆಲ್ಲರಿಗೂ ದಾರಿದೀಪವಾಗಿದೆ ಎಂದರು.

ಸಂವಿಧಾನದ ಪೀಠಿಕೆಯ ಸಾರಾಂಶದ ಬಗ್ಗೆ ನಾವೆಲ್ಲರೂ ತಿಳಿದುಕೊಳ್ಳಬೇಕು. ಇದರಿಂದ ನಮ್ಮ ದೇಶ ಪ್ರಜಾಪ್ರಭುತ್ವದಲ್ಲಿ ಉತ್ತುಂಗಕ್ಕೆ ಹೋಗಬಹುದು ಹಾಗೂ ಇಡೀ ವಿಶ್ವಕ್ಕೆ ಮಾದರಿಯಾಗಿ ಇರಬಹುದು. ಹಾಗಾಗಿ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಂಗವಾಗಿ ಭಾರತ ಸಂವಿಧಾನದ ಪೀಠಿಕೆಯನ್ನು ಸಮಾರಂಭದಲ್ಲಿದ್ದ ಎಲ್ಲರೂ ವಾಚನ ಮಾಡಿ, ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ವಿಶೇಷ ಉಪನ್ಯಾಸ ನೀಡಿದ, ವೇದಾಂತ್ ಅವರು, ಸ್ವಾತಂತ್ರ್ಯಪೂರ್ವ ಭಾರತ ಹಾಗೂ ಸ್ವಾತಂತ್ರ್ಯ ನಂತರದ ಭಾರತ ಎರಡನ್ನೂ ಕಟ್ಟುವಂತಹ ಜವಾಬ್ದಾರಿ, ಹೊಣೆಗಾರಿಕೆ ಡಾ.ಬಿ.ಆರ್.ಅಂಬೇಡ್ಕರ್ ಅವರಿಗಿತ್ತು. ಬ್ರೀಟಿಷರು ಆಳ್ವಿಕೆ ಮಾಡಿದ ಭಾರತ ಒಡೆದ ಮನೆಯಾಗಿತ್ತು. ಒಡೆದ ಸ್ಥಿತಿಯಲ್ಲಿದ್ದ ಇಡೀ ಅಖಂಡ ಭಾರತವನ್ನು ಒಂದುಗೂಡಿಸುವ, ಸಂಭಾಳಿಸುವ ಹೊಣೆಗಾರಿಕೆಯನ್ನು ಮೊದಲನೆಯದಾಗಿ ನಿಭಾಯಿಸಬೇಕಿತ್ತು. ಇದರ ಜೊತೆಗೆ ಭಾರತದಲ್ಲಿ ಅನೇಕ ಧರ್ಮ, ಜಾತಿಗಳು, ಲಿಂಗತಾರತಮ್ಯ, ದ್ವೇಷ ಮತ್ತು ಪ್ರಾದೇಶಿಕ ಅಸಾಮಾನತೆಯಿಂದ ಭಾರತ ಕೂಡಿತ್ತು. ಇಂತಹ ಬಹುತ್ವ ಭಾರತವನ್ನು ಒಂದು ದೇಶವಾಗಿ ರೂಪಿಸುವ ಹೊಣೆ ಬಾಬಾಸಾಹೇಬ್ ಅವರ ಮೇಲಿತ್ತು.

ಪುಟ 2

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್

# ಅ.2ರವರೆಗೆ ಸ್ವಚ್ಛತೆ ವಿಶೇಷ ಜನಾಂದೋಲನ

» ಚಿತ್ರದುರ್ಗ



ಜಿಲ್ಲೆಯ ಎಲ್ಲಾ ಗ್ರಾಮೀಣ ಪ್ರದೇಶಗಳಲ್ಲಿ "ಸ್ವಚ್ಛತಾ ಹೀ ಸೇವಾ / ಸ್ವಚ್ಛತೆಯೇ ಸೇವೆ" ಎಂಬ ವಿಶೇಷ ಜನಾಂದೋಲನವನ್ನು ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 2 ರವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ತಿಳಿಸಿದ್ದಾರೆ. ಅಕ್ಟೋಬರ್ 02ರ ಮಹಾತ್ಮ ಗಾಂಧೀಜಿಯವರ ಜನ್ಮ ದಿನದ ಸ್ಮರಣಾರ್ಥವಾಗಿ "ಸ್ವಚ್ಛ ಭಾರತ ದಿನ"ವನ್ನಾಗಿ ಆಚರಿಸಲಾಗುತ್ತಿದೆ. ಗಾಂಧೀಜಿರವರ ಧ್ಯೇಯವಾಕ್ಯ "ಸ್ವಚ್ಛತೆಯೇ ದೈವತ್ವ" ಎಂಬ ಕನಸು ನನಸಾಗಿಸಲು ಸೆಪ್ಟೆಂಬರ್ 15 ರಿಂದ ಅಕ್ಟೋಬರ್ 2 ರವರೆಗೆ 17 ದಿನಗಳವರೆಗೆ ಜಿಲ್ಲೆಯ ಎಲ್ಲಾ ಗ್ರಾಮೀಣ ಪ್ರದೇಶಗಳಲ್ಲಿ "ಸ್ವಚ್ಚತಾ ಹಿ ಸೇವಾ/ ಸ್ವಚ್ಛತೆಯೇ ಸೇವೆ" ಎಂಬ ವಿಶೇಷ ಅಂದೋಲನವನ್ನು ಹಮ್ಮಿಕೊಳ್ಳಲು ಕೇಂದ್ರ ಜಲಶಕ್ತಿ ಮಂತ್ರಾಲಯದ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ವತಿಯಿಂದ ತಿರ್ಮಾನಿಸಲಾಗಿದೆ.

ಈ ವರ್ಷದ "ಸ್ವಚ್ಛತಾ ಹೀ ಸೇವಾ / ಸ್ವಚ್ಛತೆಯೇ ಸೇವೆ ಎಂಬ ವಿಶೇಷ ಅಂದೋಲನದ ಘೋಷವಾಕ್ಯವಾಗಿ "ಕಸಮುಕ್ತ/ ತ್ಯಾಜ್ಯಮುಕ್ತ ಭಾರತ" ಎಂದು ಘೋಷಿಸಲಾಗಿದ್ದು, ಎಲ್ಲೆಡೆ ಸದೃಶ್ಯ ಸ್ವಚ್ಛತೆ ಸಾಧಿಸಿ, ಸ್ವಚ್ಛ ಸುಂದರ, ಸದೃಢ ಗ್ರಾಮಗಳನ್ನು ರೂಪಿಸುವ ಮಹಾತ್ವಾಕಾಂಕ್ಷೆಯನ್ನು ಹೊಂದಲಾಗಿದೆ. ಕಳೆದ ವರ್ಷದಂತೆಯೇ ಗ್ರಾಮಗಳ ಸ್ವಚ್ಚತೆಗೆ ಸ್ವಯಂ ಪ್ರೇರಿತರಾಗಿ ಶ್ರಮಧಾನ ಚಟುವಟಿಕೆಗಳಲ್ಲಿ ಭಾಗವಹಿಸುವುದು. ಜಿಲ್ಲೆಯ ತಾಲ್ಲೂಕು, ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಹೆಚ್ಚು ಜನಜುಂಗಳಿ ಇರುವ ಸ್ಥಳಗಳಾದ ಬಸ್‌ನಿಲ್ದಾಣ,

ಪುಟ 3

## ತಮಿಳುನಾಡಿಗೆ ಸರ್ಕಾರ ನೀರು ಬಿಟ್ಟರೆ ಕುಡಿವ ನೀರಿಗೂ ಸಮಸ್ಯೆ

» ಚಿತ್ರದುರ್ಗ

ರಾಜ್ಯ ಸರ್ಕಾರ ಮತ್ತೆ ತಮಿಳುನಾಡಿಗೆ ನೀರು ಬಿಟ್ಟರೆ ಕುಡಿಯುವ ನೀರೂ ಇಲ್ಲದ ಹಾಹಾಕಾರ ಉಂಟಾಗಲಿದೆ, ಅದರಿಂದ ಆಗುವ ಅನಾಹುತಗಳನ್ನು ಊಹಿಸಲೂ ಸಾಧ್ಯವಿಲ್ಲ, ರಾಜ್ಯದ ಎಲ್ಲ ಸಂಸದರೂ ದೆಹಲಿಯಲ್ಲಿ ಧರಣಿ ನಡೆಸಬೇಕು. ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರಬೇಕು, ರಾಜೀನಾಮ ನೀಡಲೂ ಸಿದ್ಧವಾಗಿರಬೇಕು. ಯಾವುದೇ ಕಾರಣಕ್ಕೂ ರಾಜ್ಯ ಸರ್ಕಾರ ಪ್ರಾಧಿಕಾರದ ಆದೇಶವನ್ನು ಪಾಲಿಸಬಾರದು, ತಮಿಳುನಾಡಿಗೆ ಮತ್ತೆ ನೀರು ಬಿಡಕೂಡದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸುತ್ತದೆ. ನಗರದ ಸಂತೇಪೇಟೆಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೂ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿದ ಕರವೇ ಕಾರ್ಯಕರ್ತರು ದಾರಿಯುದ್ದಕ್ಕೂ ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಸಂಸದರ ರಾಜೀನಾಮೆಗೆ ಆಗ್ರಹಿಸಿದರು. ರಾಜ್ಯದಲ್ಲಿ ಇತ್ತೀಚಿನ ವರ್ಷಗಳಲ್ಲಿ ಎಂದೂ ಕಾಣದ ಬರಗಾಲದ ನಿರ್ಮಾಣವಾಗಿದೆ.

ಪುಟ 3

ಪ್ರಮುಖ ಸುದ್ದಿ

# ದೇಶದ ಅಭಿವೃದ್ಧಿಗೆ ಅಂಬೇಡ್ಕರ್ ಸಂವಿಧಾನ ಭದ್ರ ಬುನಾದಿ

» ಚಳ್ಳಕೆರೆ






ಸಮಸ್ತ ನಾಡಿನ ಜನಕ್ಕೆ ಸೆ.15 ಪವಿತ್ರತೆಯಿಂದ ಕೂಡಿದ ಹಾಗೂ ನಮ್ಮ ಪ್ರಜಾಪ್ರಭುತ್ವವವನ್ನು ಸಂರಕ್ಷಣೆ ಮಾಡುವ ಸಂಕಲ್ಪದೊಂದಿಗೆ ನಾವೆಲ್ಲರೂ ಅಂತರಾಷ್ಟ್ರೀಯ ಪ್ರಜಾಪ್ರಭುತ್ವದಿನವನ್ನು ಆಚರಣೆ ಮಾಡುತ್ತಿದ್ದೇವೆ. ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ನೀಡಿದ ಸಂವಿಧಾನ ನಮಗೆ ಸರ್ವಸ್ವವನ್ನೂ ನೀಡಿದೆ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ತಾಲ್ಲೂಕು ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಎಚ್‌ಪಿಪಿಸಿ ಪ್ರಥಮ ದರ್ಜೆ ಕಾಲೇಜು ಬಯಲುರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರದ ಸ್ವಾತಂತ್ರ □□ ಮಹೋತ್ಸವದ ಅಮೃತ ಮಹೋತ್ಸವ ಕಾರ್ಯಕ್ರಮದಲ್ಲಿ ನಾವು ಹೆಮ್ಮೆಯಿಂದ ನಮ್ಮ ಸಂವಿಧಾನದ ಪೀಠಿಕೆಯನ್ನು ಓದೋಣ ಬನ್ನಿ ಕಾರ್ಯಕ್ರಮದ ಮೂಲಕ ಈ ಕಾರ್ಯವನ್ನು ಯಶಸ್ವಿಗೊಳಿಸುತ್ತಿದ್ದೇವೆ. ಭವ್ಯಭಾರತವನ್ನು ಸರ್ವಧರ್ಮ, ಸಮಭಾವ, ಸಾರ್ವಭೌಮ, ಪ್ರಜಾಸ್ತಾತ್ಮಕ ಗಣರಾಜ್ಯವನ್ನಾಗಿ ಮಾಡಲು ನಮಗೆ ನಮ್ಮ ಸಂವಿಧಾನ ಆಧಾರಸ್ತಂಭವಾಗಿದೆ. ದೇಶದ ಆಡಳಿತ ಸರ್ವತೋಮುಖ ಪ್ರಗತಿ, ಸಾಧನೆ ಎಲ್ಲವನ್ನೂ ನಮ್ಮ ಸಂವಿಧಾನದ ಮೂಲಕವೇ ನಾವು ಪಡೆಯಬೇಕಿದೆ. ವಿಶೇಷವಾಗಿ ನಾಡಿನ ಜನತೆಗೆ ಮತದಾನದ ಮೂಲಕ ಸರ್ಕಾರವನ್ನು ರಚಿಸುವಂತಹ ಶಕ್ತಿಯನ್ನು ನಮ್ಮ ಸಂವಿಧಾನ ನಮಗೆ ನೀಡಿದೆ. ಇಂತಹ ಸಂವಿಧಾನ ಪಡೆದ ನಾವು ಧನ್ಯರು ಎಂದರು. ಪ್ರಾಸ್ತಾವಿಕವಾಗಿ ಮಾತನಾಡಿದ ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ, ರಾಜ್ಯ ಸರ್ಕಾರದ ನಿರ್ದೇಶನದಂತೆ ಇಂದು ನಾವೆಲ್ಲರೂ ಸೇರಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಸಂವಿಧಾನ ಪೀಠಿಕೆ ಓದುವ ಮೂಲಕ ಪ್ರಾರಂಭ ಮಾಡುತ್ತಿದ್ದೇವೆ. ಇದು ಪ್ರತಿಯೊಬ್ಬ ಭಾರತೀಯರಿಗೂ ಹೆಚ್ಚು ಸಂತಸ ಪಡುವ ದಿನವಾಗಿದೆ. ನಮ್ಮ ಸಂವಿಧಾನ ನಮ್ಮೆಲ್ಲರ ಪ್ರಗತಿಗೆ ಪೂರಕವಾಗಿದೆಎಂದರು.ಕಾರ್ಯಕ್ರಮದಲ್ಲಿ ತಹಶೀಲ್ದಾರ್ ರೇಹಾನ್ ಪಾಷ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಜೆ.ಕೆ.ಹೊನ್ನಯ್ಯ, ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಡಿವೈಎಸ್ಪಿ ರಾಜಣ್ಣ, ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾ, ಬಿಸಿಎಂ ಅಧಿಕಾರಿ ದಿವಾಕರ್, ಸಿಡಿಪಿಒ ಹರಿಪ್ರಸಾದ್, ಎಸ್ಟಿ ಅಧಿಕಾರಿ ಶಿವರಾಜ್, ಪೌರಾಯುಕ್ತ ಸಿ.ಚಂದ್ರಪ್ಪ, ಪ್ರಾಂಶುಪಾಲ ಡಾ.ಆರ್.ರಂಗಪ್ಪ, ನಗರಸಭಾ ಸದಸ್ಯರಾದ ಕೆ.ವೀರಭದ್ರಪ್ಪ, ಬಿ.ಟಿ.ರಮೇಶ್‌ಗೌಡ, ಸುಮಾ, ಕವಿತಾ, ವೈ.ಪ್ರಕಾಶ್ ಮತ್ತು ಪ್ರಾಧ್ಯಾಪಕ ವರ್ಗ ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೂ ಮುನ್ನ ಶಾಸಕ ಟಿ.ರಘುಮೂರ್ತಿ ಮತ್ತು ತಾಲ್ಲೂಕು ಅಧಿಕಾರಿಗಳ ತಂಡ ಅಂಬೇಡ್ಕರ್ ವೃತ್ತದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡುವ ಮೂಲಕ ಸಂವಿಧಾನ ಶಿಲ್ಪಿಗೆ ನಮನ ಸಲ್ಲಿಸಿದರು.

## ಫಾಸ್ಟ್ ನ್ಯೂಸ್

### ವಿದ್ಯಾರ್ಥಿಗಳಿಗೆ ಸಂವಿಧಾನದ ಅರಿವು ಅಗತ್ಯ: ಸುಧಾಕರ್

» ಮೊದಲ ಪುಟದಿಂದ

ಸಂವಿಧಾನ ರಚನೆಗೂ ಮುನ್ನ ನಾಲ್ಕು ವರ್ಷಗಳ ಕಾಲ ಸತತ ಅಧ್ಯಯನ ಮಾಡಿ ಇಡೀ ಭಾರತದ ಪೂರ್ವ ಪೀಠಿಕೆಯಲ್ಲಿ ತರುವ ಪ್ರಯತ್ನ ಮಾಡಿದ್ದಾರೆ. ಸಂವಿಧಾನದ ಪೀಠಿಕೆಯನ್ನು ಇಡೀ ಸಂವಿಧಾನವೇ ಅಡಕವಾಗಿರುವ ಹಾಗೆ ಪೀಠಿಕೆಯನ್ನು ರಚನೆ ಮಾಡಿದ್ದಾರೆ ಎಂದರು.

ಸಂವಿಧಾನದಲ್ಲಿ ಇಡೀ ಪೀಠಿಕೆಗಳಲ್ಲಿ ಅಲ್ಲಲ್ಲಿ ನಾವು ನಾವು ಎಂಬ ಪದಗಳನ್ನು ಬಳಸಿದ್ದಾರೆ. ಅಂಬೇಡ್ಕರ್ ಅವರು ಸಂವಿಧಾನ ರಚನೆ ಮಾಡಿದರೂ ನಾನು ಸಂವಿಧಾನ ರಚನೆ ಮಾಡಿದ್ದೇನೆ ಎಂಬ ಸಣ್ಣ ಅಂಶವೂ ಇಲ್ಲ. ನಾವು, ನಮಗಾಗಿ, ನಾವು ಇದನ್ನು ಅಳವಡಿಸಿಕೊಂಡಿದ್ದೇವೆ. ನಾವು ಎಂಬ ಪದ ಬಹುತ್ವವನ್ನು ಸೂಚಿಸುತ್ತದೆ. ಏಕತ್ವವನ್ನು ನಿರಾಕರಿಸುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ತಹಶೀಲ್ದಾರ್ ಡಾ.ನಾಗವೇಣಿ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಸೇರಿದಂತೆ ಮುಖಂಡರಾದ ತಾಜ್‌ಪೀರ್, ನಿರಂಜನಮೂರ್ತಿ, ಡಿ.ಎನ್. ಮೈಲಾರಪ್ಪ, ರವಿ, ರಾಜಣ್ಣ, ಕುಮಾರಸ್ವಾಮಿ, ಖಾದಿ ರಮೇಶ್ ಸೇರಿದಂತೆ ಮತ್ತಿತರರು ಇದ್ದರು.

### ಬೀದಿನಾಟಕ ಕಲಾ ತಂಡಗಳಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಪ್ರಸಕ್ತ ಸಾಲಿನಲ್ಲಿ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳು ಹಾಗೂ ಯೋಜನೆಗಳ ಬಗ್ಗೆ ಬೀದಿ ನಾಟಕಗಳ ಮೂಲಕ ಜನಜಾಗೃತಿ ಮೂಡಿಸಲು ಉದ್ದೇಶಿಸಿದ್ದು, ಇದಕ್ಕಾಗಿ ಬೀದಿ ನಾಟಕ ಕಲಾ ತಂಡಗಳಿಂದ ಅರ್ಜಿ ಆಹ್ವಾನಿಸಿದೆ. ಜಿಲ್ಲೆಯ ಆಸಕ್ತ ಬೀದಿನಾಟಕ ಕಲಾ ತಂಡದವರು, ತಾವು ವಿವಿಧ ಇಲಾಖೆಗಳಡಿ ಕಾರ್ಯಕ್ರಮ ನೀಡಿದ ಕುರಿತ ದಾಖಲೆ ಹಾಗೂ ಫೋಟೋಗಳು, ಕಲಾ ತಂಡದ ಸದಸ್ಯರ ವಿವರ, ಮೊಬೈಲ್ ಸಂಖ್ಯೆ, ವಿಳಾಸ ವಿವರಗಳನ್ನು ಲಗತ್ತಿಸಿ ಅರ್ಜಿಯನ್ನು ಸೆಪ್ಟಂಬರ್ 21 ರ ಒಳಗಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಐಇಸಿ ವಿಭಾಗ, ಚಿತ್ರದುರ್ಗ ಇವರಿಗೆ ಸಲ್ಲಿಸಬೇಕು. ಪ್ರತಿ ಕಲಾ ತಂಡಗಳಲ್ಲಿ ಕನಿಷ್ಠ 08 ಜನ ಕಲಾವಿದರು ಇರಬೇಕು, ಅದರಲ್ಲಿ ಇಬ್ಬರು ಮಹಿಳಾ ಕಲಾವಿದರು ಇರುವುದು ಕಡ್ಡಾಯ. ಅರ್ಜಿ ಸಲ್ಲಿಕೆ ಸಂದರ್ಭದಲ್ಲಿ ಕನಿಷ್ಠ 08 ಕಲಾವಿದರ ವಿವರದ ಜೊತೆಗೆ, ಹೆಚ್ಚುವರಿ 04 ಕಲಾವಿದರ ವಿವರ ಹಾಗೂ ಫೋಟೊ ತಪ್ಪದೆ ಸಲ್ಲಿಸಬೇಕು. ಒಂದು ಕಲಾ ತಂಡದಲ್ಲಿ ಇರುವ ಕಲಾವಿದರು, ಬೇರೆ ತಂಡದಲ್ಲಿ ಹೆಸರು ನೀಡುವಂತಿಲ್ಲ. ಅರ್ಜಿ ಸಲ್ಲಿಸಿದ, ಅರ್ಹ ಕಲಾ ತಂಡಗಳಿಗೆ ಸೆ. 22 ರಂದು ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಆಯ್ಕೆ ಪ್ರಕ್ರಿಯೆ ನಡೆಯಲಿದೆ. ಜಿಲ್ಲೆಯಲ್ಲಿ ಬರುವ ಬೀದಿನಾಟಕ/ಜಾನಪದ ಕಲಾ ತಂಡದವರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರಿಂದ ಅನುಮೋದನೆ ಹೊಂದಿರುವವರು ಆಯ್ಕೆ ಪ್ರಕ್ರಿಯೆಗೆ ಅರ್ಹರಿರುತ್ತಾರೆ. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿ, ಉತ್ತಮ ಪ್ರದರ್ಶನ ನೀಡಿದ ತಂಡವನ್ನು ವಿವಿಧ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ಸಮಿತಿಯು ಆಯ್ಕೆ ಮಾಡಲಿದೆ. ಆಯ್ಕೆಯಾದ ಕಲಾ ತಂಡದವರಿಗೆ ವಿಭಾಗೀಯ ಮಟ್ಟದ ತರಬೇತಿಗೆ ಕಳುಹಿಸಿ ಕೊಡಲಾಗುವುದು, ವಿಭಾಗಮಟ್ಟದಲ್ಲಿ ನಡೆಯುವ ತರಬೇತಿಗೆ ಭಾಗವಹಿಸದ ಕಲಾ ತಂಡವನ್ನು ಅನರ್ಹಗೊಳಿಸಲಾಗುವುದು. ಹೆಚ್ಚಿನ ವಿವರವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯ ಐ.ಇ.ಸಿ. ವಿಭಾಗವನ್ನು ಸಂಪರ್ಕಿಸಬಹುದಾಗಿದೆ ಎಂದು ಡಿಹೆಚ್‌ಒ ಡಾ. ರಂಗನಾಥ್ ಅವರು ತಿಳಿಸಿದ್ದಾರೆ.

### ಅನಿರೀಕ್ಷಿತ ದಾಳಿ, 3 ಬಾಲ ಕಾರ್ಮಿಕರ ಪತ್ತೆ, ಮಾಲಿಕರ ವಿರುದ್ಧ ಕ್ರಮ

» ದಾವಣಗೆರೆ

ದಾವಣಗೆರೆ ನಗರದಲ್ಲಿ ಸೆಪ್ಟೆಂಬರ್ 14 ರಂದು ಬಾಲಕಾರ್ಮಿಕರು ಮತ್ತು ಕಿಶೋರ ಕಾರ್ಮಿಕರು ದುಡಿಯುತ್ತಿರುವ ಕ್ಷೇತ್ರಗಳಿಗೆ ಅನಿರೀಕ್ಷಿತ ದಾಳಿ ಮಾಡಿ 3 ಜನ ಬಾಲಕಾರ್ಮಿಕರ ಪತ್ತೆ ಮಾಡಲಾಗಿದೆ.ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಮಹಾವೀರ ಎಂ ಕರೆಣ್ಣವರ ಹಾಗೂ ಸಹಾಯಕ ಕಾರ್ಮಿಕ ಆಯುಕ್ತರಾದ ವೀಣಾ ಎಸ್.ಆರ್, ಜಿಲ್ಲಾ ಕಾರ್ಮಿಕ ಅಧಿಕಾರಿ ಜಿ. ಇಬ್ರಾಹಿಂ ಸಾಬ್, ಕಾರ್ಮಿಕ ನಿರೀಕ್ಷಕರಾದ ರಾಜಪ್ಪ, ನಾಗೇಶ್, ರಾಜಶೇಖರ, ಯೋಜನಾ ನಿರ್ದೇಶಕರಾದ ಪ್ರಸನ್ನ, ಮಕ್ಕಳ ರಕ್ಷಣಾ ಘಟಕದ ಕೆ.ಆರ್.ಹಾಲೇಶ, ಹಾಗೂ ಪೊಲೀಸ್ ಸಿಬ್ಬಂದಿಗಳು ಇವರ ನೇತೃತ್ವದಲ್ಲಿ ಅನಿರೀಕ್ಷಿತ ದಾಳಿಯಲ್ಲಿ ಪತ್ತೆಯಾದ 3 ಮಕ್ಕಳನ್ನು ಪುನರ್ ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿಯ ವಶಕ್ಕೆ ನೀಡಲಾಗಿದ್ದು, ಮಾಲೀಕರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಕ್ರಮ ಕೈಗೊಳ್ಳಲಾಗಿದೆ.

# ಕೇಂದ್ರ ಸರ್ಕಾರದ ಯೋಜನೆಗಳ ಹೆಚ್ಚೆಚ್ಚು ಪ್ರಚಾರದಿಂದ ಬಡಜನರಿಗೆ ಅನುಕೂಲ: ಸಂಸದ ಡಾ;ಜಿ.ಎಂ ಸಿದ್ದೇಶ್ವರ

» ದಾವಣಗೆರೆ

ಕೇಂದ್ರ ಸರ್ಕಾರದ ಯೋಜನೆ ಹಾಗೂ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಪ್ರಚುರ ಪಡಿಸುವುದರಿಂದ ಜನಸಾಮಾನ್ಯರಿಗೆ ಮತ್ತು ಬಡಜನರಿಗೆ ಅನುಕೂಲವಾಗಲಿದೆ ಎಂದು ದಾವಣಗೆರೆ ಸಂಸದರಾದ ಡಾ. ಜಿ.ಎಂ. ಸಿದ್ದೇಶ್ವರ ತಿಳಿಸಿದರು.

ಭಾರತ ಸರ್ಕಾರದ ವಾರ್ತಾ ಶಾಖೆ(ಪಿ.ಐ.ಬಿ) ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ದಾವಣಗೆರೆ ಇವರ ಸಹಯೋಗದೊಂದಿಗೆ ನಗರದ ಅಪೂರ್ವ ಹೋಟೆಲ್ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಕುರಿತಂತೆ ಜಿಲ್ಲಾ ಮಾಧ್ಯಮ ಪ್ರತಿನಿಧಿಗಳಿಗೆ ಆಯೋಜಿಸಿದ ವಾರ್ತಾಲಾಪ ಕಾರ್ಯಾಗಾರ ಮತ್ತು ಸಂವಾದ ಉದ್ಘಾಟಿಸಿ ಅವರು ಮಾತನಾಡಿದರು.

ಜನಸಾಮಾನ್ಯರು, ಬಡವರಿಗೆ ಅನುಕೂಲವಾಗಲೆಂದು ಕೇಂದ್ರ ಸರ್ಕಾರ ಜನಧನ್, ಪ್ರಧಾನ ಮಂತ್ರಿ ಜೀವನ್ ಸುರಕ್ಷಾ ಭಿಮಾ, ಜಲಜೀವನ್ ಮಿಷನ್, ಆಯುಷ್ಮಾನ್ ಭಾರತ್, ಸ್ವಧಾರ, ಉಜ್ವಲ್ ಸೇರಿದಂತೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಜನ್‌ಧನ್ ಯೋಜನೆಯ ಮೂಲಕ ಪ್ರತಿಯೊಬ್ಬರೂ ಬ್ಯಾಂಕ್




ಖಾತೆಯನ್ನು ಶೂನ್ಯ ಠೇವಣಿಯಲ್ಲಿ ಆರಂಭಿಸಲು ಅವಕಾಶ ಕಲ್ಪಿಸಿಕೊಟ್ಟಿದ್ದರಿಂದ ಅನೇಕ ಬಡವರಿಗೆ ಅನುಕೂಲವಾಗಿದೆ. ಮತ್ತು ಆಯುಷ್ಮಾನ್ ಭಾರತ್ ಆರೋಗ್ಯ ಯೋಜನೆಯಿಂದ ಅನೇಕ ಬಡವರಿಗೆ ಆರೋಗ್ಯ ಸಂರಕ್ಷಣೆ ಮಾಡಿಕೊಳ್ಳುವಲ್ಲಿ ಅನುಕೂಲವಾಗಿದೆ. ಮತ್ತು ರೈತರಿಗೆ ಫಸಲ್‌ಬಿಮಾ ಯೋಜನೆಯಿಂದಲೂ ಸಾಕಷ್ಟು ಅನುಕೂಲವಾಗಿದೆ. ಈ ಯೋಜನೆಗಳು ಗ್ರಾಮೀಣ ಜನರಿಗೆ ತಲುಪುವಂತೆ ಮಾಡಲು ಹೆಚ್ಚು ಪ್ರಚಾರ ಮಾಡುವುದರಿಂದ ಬಡವರಿಗೆ ಅನುಕೂಲವಾಗಲಿದೆ. ಮಾಧ್ಯಮಗಳು ಸಹ ಗ್ರಾಮೀಣ ಭಾಗದ ಜನರಿಗೆ ಮಾಹಿತಿ ನೀಡುವ ಮೂಲಕ ಅನುಕೂಲ ಕಲ್ಪಿಸಬೇಕಾಗಿದೆ. ಆಧುನಿಕ ದಿನಮಾನಗಳಲ್ಲಿ ಕೆಲ ಮಾಧ್ಯಮ ಕ್ಷೇತ್ರವನ್ನು ಕೇವಲ ಉದ್ಯಮಗಳಾಗಿ ಪರಿವರ್ತಿಸಿಕೊಂಡಿದ್ದಾರೆ. ಮಾಧ್ಯಮ ಕ್ಷೇತ್ರವು ಬೆಲೆ ಕಟ್ಟಲಾಗದ ಆಸ್ತಿಯಾಗಿದ್ದು, ಅಂತಹ ಗೌರವ, ಘನತೆ ಮಾಧ್ಯಮದವರಿಗಿದೆ, ಸಮಾಜದಲ್ಲಿ ಯಾರೇ ತಪ್ಪು ಮಾಡಿದರೂ ಅದನ್ನು ಸರಿಪಡಿಸುವ ಕೆಲಸವನ್ನು ಮಾಧ್ಯಮಗಳ ಮುಖಾಂತರ ಮಾಡಬೇಕು, ತಪ್ಪನ್ನು ತಿದ್ದುವುದು ಒಳ್ಳೆಯ ಆರೋಗ್ಯಕರ ಬೆಳವಣಿಗೆ ಎಂದು ಮಾಧ್ಯಮವನ್ನು ಬಣ್ಣಿಸಿದರು. ವರದಿಗಾರರು ಕೇವಲ ನಗರಕ್ಕೆ ಸೀಮಿತವಾಗಿರದೆ, ಗ್ರಾಮೀಣ ಪ್ರದೇಶಗಳಲ್ಲಿನ ಕುಂದು ಕೊರತೆಗಳನ್ನು ವರದಿ ಮಾಡುವ ಮೂಲಕ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮತ್ತು ಜನರ ನಡುವೆ ಸಂಪರ್ಕ ಸೇತುವೆಯಾಗಿ ಮಾಧ್ಯಮಗಳು ಕಾರ್ಯ ನಿರ್ವಹಿಸಬೇಕು ಎಂದರು.

ಕಾರ್ಯಗಾರ: ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟಿನ ಜಿಲ್ಲಾ ಆರೋಗ್ಯ ಸಂಯೋಜಕರಾದ ಡಾ. ನಂದಿನಿ ಮತ್ತು ಡಾ. ಪೂರ್ಣಿಮಾ ಆಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಕುರಿತು, ಜಲ್ ಜೀವನ್ ಮಿಷನ್ ಯೋಜನೆಯ ಕುರಿತು ಜಿಲ್ಲಾ ವ್ಯವಸ್ಥಾಪಕ ಜಗದೀಶ್ ಜಲ್ ಜೀವನ್ ಮಿಷನ್ ಯೋಜನೆ ಕುರಿತು, ಜಿಲ್ಲಾ ಹಣಕಾಸು ಸುರಕ್ಷತಾ ಕೌನ್ಸಿಲರ್ ಹಾಗೂ ಆರ್ಥಿಕ ಸಲಹೆಗಾರ ರಾಜೀವ ಪಾಟೀಲ್ ಅವರು ಪ್ರಧಾನಮಂತ್ರಿ ಜನ್ ಧನ್ ಯೋಜನೆ ಹಾಗೂ ಮುದ್ರಾ ಯೋಜನೆ ಕುರಿತು, ಜಿಲ್ಲಾ ವಸತಿ ನೋಡಲ್ ಅಧಿಕಾರಿ ತಿಮ್ಮೇಶ್ ಅವರು ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಕುರಿತು, ಕೃಷಿ ಇಲಾಖೆಯ ಪವನ್ ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ಕುರಿತು ಸಂಕ್ಷಿಪ್ತ ಮಾಹಿತಿ ನೀಡಿದರು.

ಉಪವಿಭಾಗಾಧಿಕಾರಿ ಎನ್.ದುರ್ಗಶ್ರೀ, ಕೇಂದ್ರ ವಾರ್ತಾ ಶಾಖೆ ಬೆಂಗಳೂರಿನ ಉಪ ನಿರ್ದೇಶಕ ಎಸ್ ಪ್ರಕಾಶ್, ಬೆಂಗಳೂರು ಮಾಧ್ಯಮ ಮತ್ತು ಸಂವಾಹನಾಧಿಕಾರಿ ಪಿ.ಜಿ ಪಾಟೀಲ್, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ, ಜಿಲ್ಲಾ ವಾರ್ತಾಧಿಕಾರಿ ಬಿ. ಧನಂಜಯಪ್ಪ, ವರದಿಗಾರರ ಕೂಟದ ಅಧ್ಯಕ್ಷ ಕೆ. ಏಕಾಂತಪ್ಪ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಇ.ಎಂ. ಮಂಜುನಾಥ್ ಉಪಸ್ಥಿತರಿದ್ದರು.

### ಸುಧಾಕರಗೆ ಸದಾ ಬೆಂಬಲವೆಂದು ಅಭಿಮಾನಿ ಬಳಗ

# ಸುಧಾಕರ್ ತೇಜೋವಧೆಗೆ ಕಾಣದ ಕೈಗಳ ತಂತ್ರ

» ಚಳ್ಳಕೆರೆ

ತಾಲ್ಲೂಕಿನ ರಾಜಕೀಯ ಕ್ಷೇತ್ರದಲ್ಲಿ ಕಳೆದ 1999ರಿಂದ ಸೇವಾ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ಜನಾನೂರಾಗಿ ಮುಖಂಡರಾಗಿ ಹೊರಹೊಮ್ಮುವ ಮೂಲಕ ಸಚಿವ ಡಿ.ಸುಧಾಕರ್ ತಮ್ಮ ರಾಜಕೀಯ ಕ್ಷೇತ್ರದಲ್ಲಿ ಉತ್ತಮ ಕೆಲಸ ಮಾಡಿದ್ದಾರೆ. ಆದರೆ, ಕಳೆದ ಹತ್ತು ವರ್ಷಗಳ ಪ್ರಕರಣದಲ್ಲಿ ಅವರನ್ನು ದುರುದ್ದೇಶದಿಂದ ಸಿಲುಕಿಸಿ ತೇಜೋವಧೆ ಮಾಡುವುದು ಸರಿಯಲ್ಲವೆಂದು ಪುರಸಭೆಯ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಟಿ.ಜೆ.ವೆಂಕಟೇಶ್ ತಿಳಿಸಿದರು.

ಅವರು, ಪ್ರವಾಸಿಮಂದಿರದಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಬೆಂಗಳೂರಿನ ಯಲಹಂಕದಲ್ಲಿ ದಲಿತ ಕುಟುಂಬದ ಜಮೀನು ಖರೀದಿಸಿದ ಅವರು ಚೆಕ್ ಮೂಲಕ ಹಣ ಪಾವತಿಸಿದ್ದಾರೆ. 10 ವರ್ಷಗಳ ಕಾಲ ಸುಮ್ಮನಿದ್ದ ಕುಟುಂಬ ಈಗ ಏಕಾಏಕಿ ಅವರ ಮೇಲೆ ಆರೋಪ ಮಾಡಿರುವುದು ಸರಿಯಲ್ಲ. ಇದರಲ್ಲಿ ಬೇರೆಯವರ ಕುಮ್ಮಕ್ಕಿನಿಂದ ಕುಟುಂಬ ಈ ಆರೋಪ ಮಾಡುತ್ತಿದ್ದು, ನಾವೆಲ್ಲರೂ ಸುಧಾಕರರವರನ್ನು ಸದಾಕಾಲ ಬೆಂಬಲಿಸುತ್ತೇವೆಂದು ತಿಳಿಸಿದರು.



ಕಾಂಗ್ರೆಸ್ ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಚೌಳೂರು ಲೋಕೇಶ್ ಮಾತನಾಡಿ, ಡಿ.ಸುಧಾಕರ್ ಸಚಿವರಾಗಿ ಕೇವಲ ಮೂರು ತಿಂಗಳ ಅವಧಿಯಲ್ಲಿ ಸಾಕಷ್ಟು ಪರಿಶ್ರಮದಿಂದ ಕಾರ್ಯನಿರ್ವಹಿಸುತ್ತಿದ್ದಾರೆ. ಜಿಲ್ಲೆಯ ಹಲವಾರು ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದಾರೆ. ದಲಿತ ಕುಟುಂಬಕ್ಕೆ ಅನ್ಯಾಯವಾಗಿದ್ದರೆ ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳುವ ಬದಲು ಪೊಲೀಸ್ ಠಾಣೆಗೆ ಹೋಗಿರುವುದು ಸರಿಯಾದ ಕ್ರಮವಲ್ಲವೆಂದರು. ಜಿಲ್ಲಾ ಕಾರ್ಯದರ್ಶಿ ಮೀರಸಾಬಿಹಳ್ಳಿ ಮೋಹನ್ ಮಾತನಾಡಿ, ವಿರೋಧ ಪಕ್ಷಗಳ ಸಹಕಾರದಿಂದ ದಲಿತ ಕುಟುಂಬ ಪ್ರತಿಭಟನೆಯ ಹಾದಿ ತುಳಿದಿದೆ. ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಸುಧಾಕರ್ ಅತಿಹೆಚ್ಚು ಮತಗಳಿಂದ ಆಯ್ಕೆಯಾಗಿದ್ದಾರೆ, ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾರೆ ಎಂದೂ ಈ ಬಗ್ಗೆ ಪ್ರಶ್ನೆ ಎತ್ತದ ಬೆಂಗಳೂರಿನ ದಲಿತ ಕುಟುಂಬದವರು ಇಂದು ಏಕಾಏಕಿ ಅವರ ಮೇಲೆ ದೂರು ನೀಡಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ತಳಕು ಎಸ್ಸಿ ಘಟಕದ ಕಾರ್ಯಕಾರಿ ಸಮಿತಿ ಸದಸ್ಯ ಓಬಳೇಶ್, ಎಂ.ತಿಪ್ಪೇಸ್ವಾಮಿ, ಜಿಲ್ಲಾ ಕಾರ್ಯದರ್ಶಿ ಡಿ.ಬಿ.ಆನಂದಕುಮಾರ್ ಉಪಸ್ಥಿತರಿದ್ದರು.

# ಬಿಸಿಯೂಟದಲ್ಲಿ ಕರ್ತವ್ಯ ನಿರ್ಲಕ್ಷ್ಯ: ಶಿಕ್ಷಕಿ ಅಮಾನತು

» ಚಿತ್ರದುರ್ಗ

ಶಾಲಾ ಮಕ್ಕಳ ಬಿಸಿಯೂಟ ಪೂರೈಕೆಯಲ್ಲಿ ಕರ್ತವ್ಯ ನಿರ್ಲಕ್ಷ್ಯ ತೋರಿದ ಚಿತ್ರದುರ್ಗದ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ಉಮ್ಮೇಸುಮಯ ಅವರನ್ನು ಅಮಾನತುಗೊಳಿಸಿ ಡಿಡಿಪಿಐ ಕೆ. ರವಿಶಂಕರ ರೆಡ್ಡಿ ಅವರು ಆದೇಶಿಸಿದ್ದಾರೆ. ಚಿತ್ರದುರ್ಗದ ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯಲ್ಲಿ ಪಿ.ಎಂ. ಪೋಷಣ್ ಯೋಜನೆಯಡಿ ಸರ್ಕಾರಿ ಉರ್ದು ಶಾಲೆಯ 110 ಮಕ್ಕಳಿಗೆ ಹಾಗೂ ಮೌಲಾನಾ ಆಜಾದ್ ಶಾಲೆಯ 150 ಮಕ್ಕಳಿಗೆ ಸೆ. 12 ರಂದು ಮಧ್ಯಾಹ್ನ ಬಿಸಿಯೂಟ (ಅನ್ನ-ಸಾಂಬಾರ್) ಜೊತೆಗೆ ಶೇಂಗಾ ಚಿಕ್ಕಿ ವಿತರಿಸಲಾಗಿತ್ತು. ಬಳಿಕ ಮಧ್ಯಾಹ್ನ 3.30 ರ ನಂತರ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆಯ ಸುಮಾರು 4 ಮಕ್ಕಳು ಹಾಗೂ ಮೌಲಾನಾ ಆಜಾದ್ ಶಾಲೆಯ 3 ಮಕ್ಕಳ ಆರೋಗ್ಯದಲ್ಲಿ ಏರುಪೇರಾಗಿ ವಾಂತಿ ಮಾಡಿಕೊಂಡು, ಅಸ್ವಸ್ಥರಾಗಿರುತ್ತಾರೆ. ಇಲಾಖೆಯ ನಿರ್ದೇಶನದಂತೆ ಶಾಲಾ ಮಕ್ಕಳಿಗೆ ಮೊಟ್ಟೆ ಅಥವಾ ಮಕ್ಕಳು ಇಚ್ಚಿಸಿದಲ್ಲಿ ಬಾಳೆಹಣ್ಣು ನೀಡಬೇಕಿರುತ್ತದೆ, ಮೊಟ್ಟೆ ಬಾಳೆಹಣ್ಣು ಇಚ್ಚಿಸದ ಮಕ್ಕಳಿಗೆ ಶೇಂಗಾ ಚಿಕ್ಕಿ ನೀಡಬಹುದಾಗಿರುತ್ತದೆ. ಆದರೆ ಸರ್ಕಾರಿ ಉರ್ದು ಶಾಲೆಯ ಮಕ್ಕಳಿಗೆ ಬಿಸಿಯೂಟದ ಜೊತೆಗೆ ಮೊಟ್ಟೆ ನೀಡುವ ಬದಲಿಗೆ ಗುಣಮಟ್ಟವಲ್ಲದ ಶೇಂಗಾ ಚಿಕ್ಕಿ ನೀಡಿದ್ದು, ಮಕ್ಕಳ ಆರೋಗ್ಯದಲ್ಲಿ ವ್ಯತ್ಯಾಸವಾಗಲು ಕಾರಣವಾಗಿರುತ್ತದೆ.ಪಿ.ಎಂ. ಪೋಷಣ್ ಅಭಿಯಾನದಡಿ ಮಕ್ಕಳಿಗೆ ಬಿಸಿಯೂಟ ವಿತರಣೆ ಸಂಬಂಧ ಪಾಲಿಸಬೇಕಾಗಿರುವ ನಿಯಮಗಳು ಹಾಗೂ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಬಗ್ಗೆ ಇಲಾಖಾ ಅಧಿಕಾರಿಗಳು ಶಾಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಹಲವು ಬಾರಿ ಮಾರ್ಗದರ್ಶನ ನೀಡಲಾಗಿರುತ್ತದೆ. ಆದಾಗ್ಯೂ ಕರ್ತವ್ಯದಲ್ಲಿ ನಿರ್ಲಕ್ಷತೆ ಹಾಗೂ ವಹಿಸಿದ ಕೆಲಸವನ್ನು ನಿರ್ವಹಿಸಲು ಬೇಜವಾಬ್ದಾರಿತನ ತೋರಿರುವುದು ಕಂಡುಬಂದಿದ್ದು, ಈ ಬಗ್ಗೆ, ಮುಖ್ಯ ಶಿಕ್ಷಕರಿಗೆ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಗಿತ್ತು. ಆದರೆ, ನೋಟಿಸ್‌ಗೆ ಯಾವುದೇ ಲಿಖಿತ ಉತ್ತರ ಸಲ್ಲಿಸಿರುವುದಿಲ್ಲ. ಈ ಎಲ್ಲ ಅಂಶಗಳನ್ನು ಪರಿಶೀಲಿಸಿ, ಚಿತ್ರದುರ್ಗದ ಸರ್ಕಾರಿ ಉರ್ದು ಹಿರಿಯ ಪ್ರಾಥಮಿಕ ಶಾಲೆ ಮುಖ್ಯ ಶಿಕ್ಷಕಿ ಉಮ್ಮೇಸುಮಯ ಅವರನ್ನು ಇಲಾಖಾ ವಿಚಾರಣೆ ಕಾಯ್ದಿರಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತುಗೊಳಿಸಿದ್ದಾರೆ.

# ಸೊಳ್ಳೆ ನಿಯಂತ್ರಣ ವಿಧಾನಗಳ ಮಾದರಿ ಪ್ರದರ್ಶನ

» ಚಿತ್ರದುರ್ಗ

ಚಿತ್ರದುರ್ಗ ಜಿಲ್ಲಾಸ್ಪತ್ರೆ ಆವರಣದ ಜಿಲ್ಲಾ ತರಬೇತಿ ಕೇಂದ್ರದಲ್ಲಿ ಗುರುವಾರ ವಿಶ್ವ ಸೊಳ್ಳೆ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದ ಸೊಳ್ಳೆ ನಿಯಂತ್ರಣ ವಿಧಾನಗಳ ಮಾದರಿ ಪ್ರದರ್ಶನ ಮತ್ತು ಬಹುಮಾನ ವಿತರಣೆ ಕಾರ್ಯಕ್ರಮ ನಡೆಯಿತು. ಜಿಲ್ಲೆಯ ಆರು ತಾಲ್ಲೂಕುಗಳಿಂದ 18 ವಿದ್ಯಾರ್ಥಿಗಳು ಸೊಳ್ಳೆ ಮಾದರಿಗಳನ್ನು ತಯಾರಿಸಿಕೊಂಡು ಭಾಗವಹಿಸಿದ್ದು, ಉತ್ತಮ ಮಾದರಿಗಳನ್ನು ಮೂರು ಜನ ತಿರ್ಪುಗಾರರು ಆರು ವಿದ್ಯಾರ್ಥಿಗಳನ್ನು ಆಯ್ಕೆ ಮಾಡಿದರು.5ನೇ ತರಗತಿಯಿಂದ 7ನೇ ತರಗತಿಯವರೆಗೆ 3 ವಿದ್ಯಾರ್ಥಿಗಳು ಆಯ್ಕೆಯಾದರು. 8 ತರಗತಿಯಿಂದ 10ನೇ ತರಗತಿಯವರೆಗೆ 3 ವಿದ್ಯಾರ್ಥಿಗಳನ್ನು ಆಯ್ಕೆ ಮಾಡಲಾಯಿತು. ಒಟ್ಟು 6 ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ಮತ್ತು ಬಹುಮಾನ ವಿತರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಎನ್. ಕಾಶಿ, ಶಿಕ್ಷಣ ಇಲಾಖೆ ವಿಷಯ ಪರೀಕ್ಷಕ ಚಂದ್ರಣ್ಣ, ಕೀಟಶಾಸ್ತ್ರಜ್ಞೆ ನಂದಿನಿ ಕಡಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀನಿವಾಸ್, ಹೆಚ್.ಎ.ನಾಗರಾಜ, ಲೋಕೇಶ್, ಪಾಂಡು, ನಾಗರಾಜ, ಟಿ. ಘನಶಾಮನಾಯ್ಕ, ರಂಗನಾಥ, ಕಾವ್ಯ ಸೇರಿದಂತೆ ಎಲ್ಲಾ ಇಲಾಖೆ ಸಿಬ್ಬಂದಿ ವರ್ಗದವರು ಮತ್ತು ಶಾಲಾ ಶಿಕ್ಷಕರು ಇದ್ದರು.

### ಮಾಂಸ ಮಾರಾಟ ನಿಷೇಧ

**ಶಿವಮೊಗ್ಗ:** ಸೆಪ್ಟಂಬರ್ 18 ರಂದು ಶ್ರೀ ಗಣೇಶ ಚತುರ್ಥಿ ಪ್ರಯುಕ್ತ ಪಾಲಿಕೆ ವ್ಯಾಪ್ತಿಯಲ್ಲಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಆದ್ದರಿಂದ ಮಾಂಸ ಮಾರಾಟದ ಮಾಲೀಕರು ತಮ್ಮ ಉದ್ದಿಮೆಯನ್ನು ಬಂದ್ ಮಾಡಿ ಸಹಕರಿಸಲು ಕೋರಿದೆ.

## ಪ್ರಮುಖ ಸುದ್ದಿ

# ಪರಿಸರ ಸ್ನೇಹಿ ಗಣೇಶ ಮೂರ್ತಿ ಬಳಸಲು ಸಲಹೆ

» ನಾಯಕನಹಟ್ಟಿ

ಪಿ.ಓ.ಪಿ ಗಣೇಶಮೂರ್ತಿಗಳನ್ನು ನಿಷೇಧಿಸಲಾಗಿದೆ. ಪರಿಸರ ಸ್ನೇಹಿ ಗಣೇಶಮೂರ್ತಿಗಳನ್ನು ಬಳಸಬೇಕೆಂದು ತಳಕು ವೃತ್ತ ಪೊಲೀಸ್ ನಿರೀಕ್ಷಕರಾದ ಕೆ.ಸಮಿಉಲ್ಲರವರು ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಈದ್‌ಮಿಲಾದ್ ಮತ್ತು ಗಣೇಶ ಹಬ್ಬದ ಶಾಂತಿ ಸಭೆ ನಡೆಯಿತು. ನಂತರ ಮಾತನಾಡಿದ ಅವರು ಹಿಂದು ಮತ್ತು ಮುಸಲ್ಮಾನ್ ಸಮುದಾಯದವರು ಭಾವೈಕ್ಯತೆಯಿಂದ ಇರಬೇಕು ಮತ್ತು ಸರ್ಕಾರ ನೀಡಿರುವ ಮಾರ್ಗ ಸೂಚಿಗಳನ್ನು ಕಡ್ಡಾಯವಾಗಿ ಎಲ್ಲಾರು ಪಾಲಿಸಬೇಕು. ಗಣಪತಿ ವಿಗ್ರಹ ವಿಸರ್ಜನೆ ಮಾಡುವ ಸ್ಥಳದಲ್ಲಿ ಜಾಗರುಕತೆ ವಹಿಸಬೇಕು. ಕಡ್ಡಾಯವಾಗಿ ಕೆಇಬಿ, ಪೊಲೀಸ್ ಠಾಣೆ, ಪಟ್ಟಣ ಪಂಚಾಯಿತಿಯಿಂದ ಅನುಮತಿ ಪಡೆಯಬೇಕು. ಡಿ.ಜೆಗೆ ಅನುಮತಿ ನೀಡುವುದಿಲ್ಲ. ಡಿ.ಜೆಗೆ ಅನುಮತಿ ಬೇಕಾದಲ್ಲಿ ಚಿತ್ರದುರ್ಗ ಜಿಲ್ಲಾಧಿಕಾರಿಗಳಿಂದ ಪಡೆಯಬೇಕು ಎಂದು ಅವರು ಹೇಳಿದರು.

ಪಿ.ಎಸ್.ಐ ದೇವರಾಜ್ ಮಾತನಾಡಿ



ಗಣೇಶನನ್ನು ಪ್ರತಿಷ್ಠಾಪನೆ ಮಾಡುವ ಆಯೋಜಕರು ಮತ್ತು ಸಂಘ ಸಂಸ್ಥೆಗಳು ಪಟ್ಟಣ ಪಂಚಾಯಿತಿಯಲ್ಲಿ ಹಾಗೂ ಕೆ.ಪಿ.ಟಿ.ಸಿ.ಎಲ್ ಪರವನಾಗಿ ಪಡೆದುಕೊಳ್ಳಬೇಕು ಮತ್ತು ಸರ್ಕಾರ ನೀಡಿರುವ ನಿಯಮಗಳನ್ನು ಕಡ್ಡಾಯವಾಗಿ ಪ್ರತಿಯೊಬ್ಬರು ಪಾಲಿಸಬೇಕಾಗಿದೆ. ಗಣೇಶನನ್ನು ಪ್ರತಿಷ್ಠಾಪನೆ ಮಾಡಿದ ಸ್ಥಳಗಳಲ್ಲಿ ಸಾಂಸ್ಕೃತಿಕ ಕಾರ್ಯಕ್ರಮಗಳು ರಾತ್ರಿ 10 ಗಂಟೆಗೆ ನಿಲ್ಲಿಸ ತಕ್ಕದ್ದು, ಮೆರವಣಿಗೆ ಸಮಯದಲ್ಲಿ ಯುವಕರು ಮದ್ಯಪಾನಿಗಳಿಂದ ದೂರ ಇರಿಸಬೇಕು. ಕಡ್ಡಾಯವಾಗಿ ಡಿ.ಜೆ ನಿಷೇಧಿಸಲಾಗಿದೆ.

ಗೌರಿಗಣೇಶ ಹಬ್ಬವನ್ನು ಶಾಂತಿ ಸುವ್ಯವಸ್ಥೆಯಿಂದ ಆಚರಿಸಬೇಕು ಸಮಾಜದಲ್ಲಿ ಎಲ್ಲಾರು ಶಾಂತಿ ಸೌಹಾರ್ದತೆ ನಾವೆಲ್ಲರೂ ಕಾಪಾಡಬೇಕು. ಗಣೇಶ ಮೂರ್ತಿಯ ಪ್ರತಿಷ್ಠಾಪನೆ ಹಾಗೂ ವಿಸರ್ಜನೆಯ ವೇಳೆ ಸಾರ್ವಜನಿಕರಿಗೆ ತೊಂದರೆಯಾಗದಂತೆ ವಿನಾಯಕ ಸಂಘ ಸಂಸ್ಥೆಗಳು ನಡೆದುಕೊಳ್ಳಬೇಕು ಎಂದರು. ಗಣೇಶಮೂರ್ತಿ ಪ್ರತಿಷ್ಠಾಪನೆ ದಿನದಿಂದ ಗಣೇಶಮೂರ್ತಿಯ ವಿಸರ್ಜನೆ ದಿನದವರೆಗೂ ಯಾವುದಾದರು ಆಹಿತಕರ ಘಟನೆಗಳು ಸಾರ್ವಜನಿಕರ ಮೇಲೆ ಬಣ್ಣ ಹಾಕುವುದು, ಕೋಮುದ್ವೇಷಕ್ಕೆ ಕಾರಣವಾಗುವಂತಹ ವರ್ತನೆಗಳು ಕಂಡುಬಂದಲ್ಲಿ ಸಮಿತಿಯವರೆ ನೇರ ಹೊಣೆಯಾಗುತ್ತಾರೆ. ಆದ ಕಾರಣ ಸರ್ವಧರ್ಮದವರು ಸಹೋದರರಂತೆ ಶಾಂತಿಯ ರೀತಿಯಾಗಿ ನೆಮ್ಮದಿಯಿಂದ ಹಬ್ಬಗಳನ್ನು ಆಚರಿಸಿ ಎಂದು ತಿಳಿಸಿದರು. ಪಟ್ಟಣದ ಮುಖಂಡರಾದ ಎಂ.ವೈ.ಟಿ.ಸ್ವಾಮಿ ಮಾತನಾಡಿ ರಾಜ್ಯದಲ್ಲಿ ನಾಯಕನಹಟ್ಟಿ ಪಟ್ಟಣದಲ್ಲಿ ಹಿಂದು ಮತ್ತು ಮುಸಲ್ಮಾನರ ಅಣ್ಣ-ತಮ್ಮಂದಿರಂತೆ ಇದ್ದೇವೆ, ನಾಯಕನಹಟ್ಟಿ ಐತಿಹಾಸಿಕ ಸ್ಥಳದಲ್ಲಿ ಯಾವುದೇ ಆಹಿತಕರ ಘಟನೆಗಳು ನಡೆದಿಲ್ಲ ಮುಂದೆಯು ಸಹ ನಡೆಯುವುದಿಲ್ಲ ಎಂದರು.ರಾಷ್ಟ್ರೀಯ ಕಿಶಾನ್ ಸಂಘದ ತಾಲ್ಲೂಕು ಅಧ್ಯಕ್ಷರಾದ ಪಂಚಾಕ್ಷರಿಸ್ವಾಮಿ ಮಾತನಾಡಿ ಧಾರ್ಮಿಕವಾಗಿ ಆಚರಣೆ ಮಾಡುವ ಗಣೇಶನ ಹಬ್ಬಕ್ಕೆ ಯಾವುದೇ ರೀತಿಯ ತೊಂದರೆಯಾಗದಂತೆ ಸರ್ಕಾರದ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕಾಗುತ್ತದೆ. ಆದರು ನಮಗೆ ಡಿ.ಜೆ ಹಾಕುವುದಕ್ಕೆ ಅವಕಾಶ ಮಾಡಿಕೊಡಿ ಎಂದು ತಳಕು ವೃತ್ತ ಪೊಲೀಸ್ ನಿರೀಕ್ಷಕರಾದ ಸಮಿಉಲ್ಲರವರ ಹತ್ತಿರ ಮನವಿ ಮಾಡಿಕೊಂಡರು

ಈ ಸಂದರ್ಭದಲ್ಲಿ ಉಪಸ್ಥಿತರಾದ ಪೊಲೀಸ್ ಪೇದೆಗಳಾದ ಅಣ್ಣಪ್ಪನಾಯ್ಕ, ನಾರಾಯಣ, ರುದ್ರಪ್ಪ, ಪ್ರದೀಪ್, ಪಟ್ಟಣ ಪಂಚಾಯಿತಿಯ ಕರವಸೂಲಿಗಾರರಾದ ಸಂದೀಪ್‌ಣ್ಣ, ಕೆಇಬಿ ವಿಭಾಗ ಅಧಿಕಾರಿಗಳಾದ ಬಿ.ಬೋರಣ್ಣ, ಪಟ್ಟಣ ಪಂಚಾಯಿತಿ ದ್ವಿತಿಯ ದರ್ಜೆ ಸಹಾಯಕರಾದ ಟಿ.ಟಿ.ತಿಪ್ಪೇಸ್ವಾಮಿ, ಶ್ರೀಗುರು ತಿಪ್ಪೇರುದ್ರಸ್ವಾಮಿ ದೇವಸ್ಥಾನದ ನೌಕರರಾದ ಸತೀಶ್, ಮಧು, ಆಟೋ ಚಾಲಕರ ಸಂಘದ ಪ್ರದಾನ ಕಾರ್ಯದರ್ಶಿ ಸಿ.ಮಹಂತೇಶ್,ರಾಷ್ಟ್ರೀಯಕಿಶಾನ್‌ಸಂಘದ ತಾಲ್ಲೂಕು ಅಧ್ಯಕ್ಷ ಪಂಚಾಕ್ಷರಿಸ್ವಾಮಿ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷರಾದ ಕೆ.ಎಂ.ಶಿವಸ್ವಾಮಿ, ಭಜರಂಗದಳದ ಪ್ರಾಣೇಶ್, ಹಿಂದು ಮಹಾಗಣಪತಿ ಸಮಿತಿ ವೇಣುಗೋಪಾಲ್, ರೇಖಲಗೆರೆ ತಿಪ್ಪೇಸ್ವಾಮಿ,ಯುಸೂಫ್,ಸೈಯದ್‌ಕೌಸರ್ ಬಾಷಾ, ಮಾಜಿ ಗ್ರಾ.ಪಂ.ಸ ಜಾಕೀರ್ ಹುಸೇನ್, ಬಿಜೆಪಿ ಎಸ್.ಟಿ.ಮೋರ್ಚಾ ಜಿಲ್ಲಾಧ್ಯಕ್ಷರಾದ ಶಿವಣ್ಣ, ಕರ್ನಾಟಕ ರಕ್ಷಣ ವೇಧಿಕೆ ಹೋಬಳಿ ಘಟಕದ ಅಧ್ಯಕ್ಷೆ ಮುತ್ತಣ್ಣ, ಗೌಡಗೆರೆ ಗ್ರಾ.ಪಂ. ಮಾಜಿ ಅಧ್ಯಕ್ಷರಾದ ರಂಗಪ್ಪ ಇದ್ದರು.

## ಫಾಸ್ಟ್ ನ್ಯೂಸ್

### ಅ.2ರವರೆಗೆ ಸ್ವಚ್ಛತೆ ವಿಶೇಷ ಜನಾಂದೋಲನ

» ಮೊದಲ ಪುಟದಿಂದ

ರೈಲ್ವೆ ನಿಲ್ದಾಣ, ಕೆರೆ, ಹಳ್ಳಿ, ನದಿ ತೀರ, ಸ್ಥಾಂಸ್ಥಿಕ, ಸಮುದಾಯ ಭವನ, ಪ್ರವಾಸಿ ತಾಣಗಳು, ಐತಿಹಾಸಿಕ ಸ್ಮಾರಕಗಳು, ಚರಂಡಿಗಳು ಮತ್ತು ನಾಲಾಗಳು ಮುಂತಾದ ಸ್ಥಳಗಳಲ್ಲಿ ಸ್ವಚ್ಛತೆ ಮತ್ತು ಏಕಬಳಕೆ ಪ್ಲಾಸ್ಟಿಕ್ ವಸ್ತುಗಳ ಬಳಕೆಯನ್ನು ನಿಷೇಧ ಹಾಗೂ ಇತರ ವಿಷಯಗಳ ಕುರಿತು ಜಾಗೃತಿ, ದೃಶ್ಯ ಸ್ವಚ್ಛತೆ ಕಾಯ್ದುಕೊಳ್ಳಲು ಶ್ರಮದಾನ ಮತ್ತು ವಿವಿಧ ಚಟುವಟಿಕೆಗಳನ್ನು ಆಯೋಜಿಸಲಾಗುತ್ತದೆ.ಈ ನಿಟ್ಟಿನಲ್ಲಿ ಚಿತ್ರದುರ್ಗ ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿಗಳು, ಎನ್.ಜಿ.ಓ, ಎಸ್.ಹೆಚ್.ಜಿ, ನೆಹರು ಯುವ ಕೇಂದ್ರ, ಶಾಲಾ ಕಾಲೇಜು ವಿದ್ಯಾರ್ಥಿಗಳು, ಮಹಿಳಾ ಒಕ್ಕೂಟಗಳು, ಯುವ ಸಂಘಟನೆಗಳು, ಎನ್‌ಸಿಸಿ, ಎನ್‌ಎಸ್‌ಎಸ್ ವಿದ್ಯಾರ್ಥಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಿಬ್ಬಂದಿಗಳು, ಗ್ರಾಮಸ್ಥರು, ಆಶಾ-ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಂಬಂಧಿತ ಪಾಲುದಾರರೊಂದಿಗ ತಮ್ಮ ಹಂತದಲ್ಲಿ "ಸ್ವಚ್ಛತಾ ಹೀ ಸೇವಾ/ ಸ್ವಚ್ಛತೆಯೇ ಸೇವೆ ಜನಾಂದೋಲನವನ್ನು ಹಮ್ಮಿಕೊಳ್ಳಬೇಕು. ಜಿಲ್ಲೆಯ ಸಾರ್ವಜನಿಕರು ಈ ಜನಾಂದೋಲನದಲ್ಲಿ ಪಾಲ್ಗೊಂಡು ಸದೃಢ ಭಾರತ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಪ್ತಿ ಮಾಡಿದ ಅಕ್ಕಿ, ಸೆ. 21 ರಂದು ಬಹಿರಂಗ ಹರಾಜು

» ದಾವಣಗೆರೆ

ಜಗಳೂರು ಪಟ್ಟಣದ ಚಳ್ಳಕೆರೆ ಸರ್ಕಲ್ ಹತ್ತಿರ ಅಕ್ರಮವಾಗಿ ಸಾಗಿಸುತ್ತಿದ್ದ 1.30 ಕ್ವಿಂಟಾಲ್ ಅಕ್ಕಿಯನ್ನು ವಶಪಡಿಸಿಕೊಳ್ಳಲಾಗಿದೆ. 1.30 ಕ್ವಿಂಟಾಲ್ ಅಕ್ಕಿಯ ದಾಸ್ತಾನನ್ನು ಸೆಪ್ಟೆಂಬರ್ 21 ರಂದು ಬೆಳಿಗ್ಗೆ 11 ಗಂಟೆಗೆ ಜಗಳೂರು ಎ.ಪಿ.ಎಂ.ಸಿ ಆವರಣದಲ್ಲಿರುವ ಕೆ.ಎಫ್.ಸಿ.ಎಸ್.ಸಿ ಸಗಟು ಮಳಿಗೆ ಜಗಳೂರು ಇಲ್ಲಿ ಬಹಿರಂಗ ಹರಾಜು ಮಾಡಲಾಗುವುದು ಎಂದು ಜಗಳೂರು ತಹಶೀಲ್ದಾರ್ ತಿಳಿಸಿದ್ದಾರೆ.

### ಉಚಿತಾ ಮೆಗಾ ಕೃತಕ ಅಂಗ ಜೋಡಣೆ ಶಿಬಿರ

» ದಾವಣಗೆರೆ

ಹರಿ ಓ ಸ್ಮೈಲ್ ಹಾಗೂ ಭಗವಾನ ಮಹಾವೀರ ವಿಕಲಾಂಗ ಸಹಾಯತ ಸಮಿತಿಯವರು ಅಕ್ಟೋಬರ್ 10 ಮತ್ತು 11 ರಂದು ಗುರುದ್ವಾರ ಸದ್‌ಸಂಗತ್ ಜಾಲಹಳ್ಳಿ ಪಶ್ಚಿಮ, ಹೆಚ್.ಎಂ.ಟಿ ಎಸ್ಟೇಟ್ ಬೆಂಗಳೂರು-560015 ಇಲ್ಲಿ ಉಚಿತ ಮೆಗಾ ಕೃತಕ ಅಂಗ ಜೋಡಣೆ ಶಿಬಿರವನ್ನು ಆಯೋಜಿಸಲಾಗಿದೆ. ದಾವಣಗೆರೆ ಜಿಲ್ಲೆಯ ವಿಶೇಷಚೇತನರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬಹುದು ಹೆಚ್ಚಿನ ಮಾಹಿತಿಗಾಗಿ ವಿಜಯಲಕ್ಷ್ಮೀ ಜಿಂದಾಲ ಮೊ.ಸಂ: 9035744512, ಸಂದೀಪ್ ಮೊ.ಸಂ:7411700974, ಸಂಧ್ಯಾಮೊ.ಸಂ: 9019176767 ಇವರನ್ನು ಸಂಪರ್ಕಿಸಬಹುದೆಂದು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ॥ ಕೆ.ಕೆ. ಪ್ರಕಾಶ್ ತಿಳಿಸಿದ್ದಾರೆ.

### ನಿಗದಿತ ಸ್ಥಳಗಳಲ್ಲಿಯೇ ಗಣೇಶ ವಿಸರ್ಜನೆಗೆ ಪಾಲಿಕೆ ಸೂಚನೆ

» ದಾವಣಗೆರೆ

ಗಣೇಶ ಹಬ್ಬದ ಅಂಗವಾಗಿ ಗಣೇಶ ಮೂರ್ತಿ ವಿಸರ್ಜನೆಗೆ ದಾವಣಗೆರೆ ಮಹಾನಗರ ಪಾಲಿಕೆ ವತಿಯಿಂದ, ಸೆ. 18, 20 ಮತ್ತು 22 ರಂದು ನಗರದ 30 ಸ್ಥಳಗಳಲ್ಲಿ ಟ್ರ್ಯಾಕ್ಟರ್ ಟ್ರೇಲರ್ ನಿಲ್ಲಿಸುವ ಮೂಲಕ ತಾತ್ಕಾಲಿಕ ವ್ಯವಸ್ಥೆ ಕಲ್ಪಿಸಲಾಗಿದೆ, ಸಾರ್ವಜನಿಕರು ಗಣೇಶ ಮೂರ್ತಿಗಳನ್ನು ನಿಗದಿತ ಸ್ಥಳದಲ್ಲಿಯೇ ವಿಸರ್ಜನೆ ಮಾಡಬೇಕು ಎಂದು ಮಹಾನಗರಪಾಲಿಕೆ ಆಯುಕ್ತೆ ರೇಣುಕಾ ತಿಳಿಸಿದ್ದಾರೆ. ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಟ್ರ್ಯಾಕ್ಟರ್ ಟ್ರೇಲರ್ ನಿಲ್ಲಿಸಲಾಗುವ ಸ್ಥಳಗಳ ವಿವರ ಇಂತಿದೆ. ಹಗೆದಿಬ್ಬ ವೃತ್ತ, ರಾಜಕುಮಾರ ಶಾಲೆ ಹತ್ತಿರ ಕುರುಬರ ಕೇರಿ, ಕೊಂಡಜ್ಜಿ ರಸ್ತೆ (ಶಿಬಾರ) ಮೈಲಾರಲಿಂಗೇಶ್ವರ ದೇವಸ್ಥಾನ, ದೇವರಾಜ ಅರಸ್ ಬಡಾವಣೆ ಕೋರ್ಟ್ ಹಿಂಭಾಗ, ದುಗ್ಗಾಂಬಿಕ ದೇವಸ್ಥಾನ (ಶಿವಾಜಿ ವೃತ್ತ), ಹೊಂಡದ ವೃತ್ತ, ಬೇತೂರು ರಸ್ತೆ ವೆಂಕಟೇಶ್ವರ ವೃತ್ತ, ಮಹಾರಾಜಪೇಟೆ ವಿಠಲಮಂದಿರ, ಚೌಕಿಪೇಟೆಯ ಹಾಸಬಾವಿ ವೃತ್ತ, ವಿನೋಬನಗರ 3ನೇ ಮುಖ್ಯ ರಸ್ತೆ, ರಾಮ್ ಅಂಡ್ ಕೋ ಸರ್ಕಲ್, ಕಾಯಿಪೇಟೆಯ ಬಸವೇಶ್ವರ ವೃತ್ತ, ಬಂಬೂ ಬಜಾರ್ (ಗಣೇಶ ಹೋಟೆಲ್ ಬಳಿ), ಎಸ್‌ಎಸ್ ಲೇಔಟ್ ಬನ್ನಿಮರದ ಹತ್ತಿರ ರಿಂಗ್ ರಸ್ತೆ, ಎಂಸಿಸಿ ಎ ಬ್ಲಾಕ್ ಬಕ್ಕೇಶ್ವರ ಸ್ಕೂಲ್ ಮುಂಭಾಗ, ಜಯದೇವ ವೃತ್ತ, ಡಿಸಿಎಂ ಲೇಔಟ್ ಸರ್ಕಲ್ ಹತ್ತಿರ, ಆವರಗೆರೆಯ ಸರ್ಕಾರಿ ಶಾಲೆಯ ಹತ್ತಿರ, ಸರಸ್ವತಿ ಬಡಾವಣೆ ಪಂಚಮುಖಿ ಆಂಜನೇಯ ದೇವಸ್ಥಾನ, ಶಿವಕುಮಾರ ಸ್ವಾಮಿ ಬಡಾವಣೆ 1ನೇ ಹಂತದ ಸಂಜೀವಿನಿ ಆಂಜನೇಯ ದೇವಸ್ಥಾನ, ನಿಜಲಿಂಗಪ್ಪ ಬಡಾವಣೆ ಪಾರ್ವತಿ ದೇವಸ್ಥಾನ, ಆಂಜನೇಯ ಬಡಾವಣೆ ಆಂಜನೇಯ ದೇವಸ್ಥಾನ, ಶಾಮನೂರಿನ ಶ್ರೀರಾಮ ಮಂದಿರ, ಹಳೇ ಕುಂದುವಾಡ ಆಂಜನೇಯ ದೇವಸ್ಥಾನ, ಸಾರ್ವಜನಿಕರು ಮಹಾನಗರಪಾಲಿಕೆ ವತಿಯಿಂದ ನಿಗದಿಪಡಿಸಲಾದ ಸ್ಥಳಗಳಲ್ಲಿಯೇ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡುವ ಮೂಲಕ ಮಾಲಿನ್ಯ ತಡೆಗಟ್ಟಲು ಸಹಕರಿಸಬೇಕು.

# ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರ ಬೇಡಿಕೆಗೆ ಈಡೇರಿಕೆಗೆ ಸರ್ಕಾರ ನಿರ್ಲಕ್ಷ್ಯ: ಸೌಲಭ್ಯ ಒದಗಿಸಲು ತಾಕೀತು

» ಚಳ್ಳಕೆರೆ

ಕಳೆದ ಸುಮಾರು 40 ವರ್ಷಗಳಿಂದ ಲಕ್ಷಾಂತರ ಅಂಗನವಾಡಿ ಕಾರ್ಯಕರ್ತರೆರು ಹಾಗೂ ಸಹಾಯಕಿಯರು ಸರ್ಕಾರ ನೀಡುವ ಅಲ್ಪಗೌರವ ಧನದಿಂದ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಾ ಬಂದಿದ್ದು, ಇವರುಗಳಿಗೆ 15 ಸಾವಿರ ಮಾಸಿಕ ವೇತನ ಹಾಗೂ ಇತರೆ ಸೌಕರ್ಯ ಕಲ್ಪಿಸುವಂತೆ ಹಾಗೂ ಶಿಶುಪಾಲನಾ ಕೇಂದ್ರಗಳ ಸ್ಥಾಪನೆಗೆ ವಿರೋಧ ವ್ಯಕ್ತಪಡಿಸಿ ಎಐಟಿಯುಸಿ ಸಂಘಟನೆಯ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಪ್ರತಿಭಟನೆ ನಡೆಸಿದರು.

ಎಐಟಿಯುಸಿ ಸಂಘಟನೆಯ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ ನೇತೃತ್ವದಲ್ಲಿ ನೂರಾರು ಕಾರ್ಯಕರ್ತೆಯರು ಬೆಂಗಳೂರು ರಸ್ತೆಯಿಂದ ಮೆರವಣಿಗೆ ಹೊರಟು ದಾರಿಯುದ್ದಕ್ಕೂ ಸರ್ಕಾರ ವಿರುದ್ಧ ಘೋಷಣೆ ಕೂಗಿ ತಾಲ್ಲೂಕು ಕಚೇರಿಗೆಆಗಮಿಸಿಬೇಡಿಕೆಈಡೇರಿಸುವಂತೆ ಒತ್ತಾಯಿಸಿ ಪ್ರತಿಭಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜ್ಯ ಸಂಚಾಲಕ ಸಿ.ವೈ.ಶಿವರುದ್ರಪ್ಪ, ಗ್ರಾಮೀಣ ಭಾಗದಲ್ಲಿ ಬಾಣಂತಿ, ಮಗುವಿನ ಆರೈಕೆಯೂ ಸೇರಿದಂತೆ ಅಂಗನವಾಡಿ ಕೇಂದ್ರದಲ್ಲಿ ಮಕ್ಕಳಿಗೆ ಪೌಷ್ಠಿಕ ಆಹಾರ ವಿತರಣೆ, ಸಾರ್ವಜನಿಕರ ಆರೋಗ್ಯ ರಕ್ಷಣೆ, ಸರ್ಕಾರ ಹಲವಾರು ಜಾಗೃತಿ ಕಾರ್ಯಕ್ರಮಗಳ ಜನರಿಗೆ ತಲುಪಿಸುವ ಕಾರ್ಯವನ್ನು ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಮಾಡುತ್ತಾ ಬಂದಿದ್ದಾರೆ. ಅಂಗನವಾಡಿ ಕಾರ್ಯಕರ್ತೆಯರಿಗೆ ವೇತನವೂ ಸೇರಿದಂತೆ ಹಲವಾರು ಸೌಲಭ್ಯಗಳನ್ನು ಆರನೇ ಗ್ಯಾರಂಟಿ ಮೂಲಕ ನೀಡಬೇಕೆಂದು ಸರ್ಕಾರಕ್ಕೆ ಈಗಾಗಲೇ ಮನವಿ ಮಾಡಿಕೊಳ್ಳಲಾಗಿದೆ. ಆದರೆ, ಸರ್ಕಾರ ಹೆಚ್ಚಿನ ನೆರವು ನೀಡಿ ಇವರ ಬದುಕಿಗೆ ಆರ್ಥಿಕ ಶಕ್ತಿಯನ್ನು ತುಂಬಿ ಆಸರೆಯಾಗುವ ಬದಲು ಇವರ ಸೌಲಭ್ಯಗಳಿಗೆ ತೆರೆಯ ಮರೆಯಲ್ಲಿ ಕತ್ತರಿ ಹಾಕುವ ಕೆಲಸ ಮಾಡುತ್ತಿವೆ. ಸರ್ಕಾರ ವಿವಿಧ ಇಲಾಖೆಗಳು ಪರ್ಯಾಯವಾಗಿ ಶಿಶುಪಾಲನ ಕೇಂದ್ರಗಳು ಶಾಲಾ ಪೂರ್ವ ಶಿಕ್ಷಣ ತರಗತಿಗಳನ್ನು ಆರಂಭಿಸಲು ಮುಂದಾಗಿದೆ. ಇದರಿಂದ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ದೊಡ್ಡಪ್ರಮಾಣದಲ್ಲಿ ವಂಚನೆ ಮಾಡಿದಂತಾಗಿದೆ. ಇದನ್ನು ವಿರೋಧಿಸಿ ಪ್ರತಿಭಟನೆ ನಡೆಸಲಾಗಿದೆ ಎಂದರು.ಅಖಿಲಭಾರತ ಕಿಸಾನ್ ಸೇಲ್ ಅಧ್ಯಕ್ಷ ದೊಡ್ಡ ಉಳ್ಳಾರ್ತಿ ಕರಿಯಣ್ಣ ಮಾತನಾಡಿ, ಇಂದು ಯಾವುದೇ ಹಳ್ಳಿಗೆ ಭೇಟಿ ನೀಡಿದರೂ ಅಲ್ಲಿ ಅಂಗನವಾಡಿ ಕಾರ್ಯಕರ್ತೆ,ಸಹಾಯಕಿಯರಕೆಲಸಬಗ್ಗೆ ನಾವು ಮೆಚ್ಚುಗೆಯ ಮಾತು ಕೇಳುತ್ತೇವೆ. ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಇಲ್ಲದೇ ಇದ್ದರೆ ಬಾಣಂತಿ ಹಾಗೂ ಹುಟ್ಟುವ ಮಕ್ಕಳು ಅನಾರೋಗ್ಯ ಪೀಡಿತರಾಗುವ ಸಂಭವೇ ಹೆಚ್ಚು. ಈ ಹಿನ್ನೆಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಗ್ರಾಮೀಣ ಭಾಗದಲ್ಲಿ ಆರೋಗ್ಯ ಜಾಗೃತಿ ಹಾಗೂ ಸರ್ಕಾರ ಯೋಜನೆಗಳ ಬಗ್ಗೆ ಜನರಿಗೆ ಮಾಹಿತಿ ನೀಡುತ್ತಿದ್ದಾರೆ. ಇಂತಹ ಬಹುಮುಖ ಪ್ರತಿಭೆಯುಳ್ಳ ಇವರನ್ನು ಸರ್ಕಾರ ನಿರ್ಲಕ್ಷಿಸಿರುವುದು ಸರಿಯಲ್ಲವೆಂದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್ ಪಾಷ,ತಾವು ಮುಖ್ಯಮಂತ್ರಿಗಳಿಗೆ ನೀಡಿದ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ಪ್ರತಿಭಟನೆಯಲ್ಲಿ ಎಐಟಿಯುಸಿ ಅಧ್ಯಕ್ಷ ಪಿ.ತಿಪ್ಪೇರುದ್ರಪ್ಪ, ಅಂಗನವಾಡಿ ಕಾರ್ಮಿಕ ಘಟಕ ಅಧ್ಯಕ್ಷೆ ಓಬಕ್ಕ, ಎಂ.ಪುಟ್ಟಕ್ಕ, ಪಿ.ಪದ್ಮ, ಸರೋಜಮ್ಮ, ಎಚ್.ಲಕ್ಷ್ಮೀ, ಓ.ವೀಣಾ, ಎಚ್.ಸಾವಿತ್ರಮ್ಮ,ಲೀಲಾ, ನಾಗವೇಣಿ, ಓಬಮ್ಮ, ಮುಬೀನಾಭಾನು, ವಿಮಲಾಕ್ಷಿ ಮುಂತಾದವರು ಇದ್ದರು.



# ಪೊಲೀಸ್ ಕಾರ್ಯಕ್ಕೆ ಜನರ ಸಹಕಾರವೇ ಅಸ್ತ್ರ

» ಚಳ್ಳಕೆರೆ

ಕಳೆದ ಹಲವಾರು ವರ್ಷಗಳಿಂದ ಸಾರ್ವಜನಿಕರಿಗೆ ಭದ್ರತೆಯ ಜೊತೆಗೆ ಸಮಾಜ ವಿರೋಧಿ ಚಟುವಟಿಕೆಗಳನ್ನು ಸಹ ವಿರೋಧಿಸಿ ನೆಮ್ಮದಿ ಬದುಕನ್ನು ನೀಡುವಲ್ಲಿ ಪೊಲೀಸ್ ಇಲಾಖೆ ಯಶಸ್ವಿಯಾಗಿದೆ ಎಂದು ತುಮಕೂರು ಜಿಲ್ಲಾ ರಕ್ಷಣಾಧಿಕಾರಿ ಅಶೋಕ್ ತಿಳಿಸಿದರು.

ಅವರು, ಖಾಸಗಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದ ಸಂದರ್ಭದಲ್ಲಿ ಪ್ರವಾಸಿಮಂದಿರದಲ್ಲಿ ಎಲ್‌ಐಸಿ ದುಗ್ಗಾವರ ರಂಗಸ್ವಾಮಿ ಅಭಿಮಾನಿ ಬಳಗ ಅವರನ್ನು ಸನ್ಮಾನಿಸಿ ಸಂದರ್ಭದಲ್ಲಿ ಮಾತನಾಡಿದರು. ಪೊಲೀಸ್ ಇಲಾಖೆ ಯಶಸ್ವಿಯಾಗಿ ಕಾರ್ಯನಿರ್ವಹಿಸಲು ಸಾರ್ವಜನಿಕರು ನೀಡುವ ಸಹಕಾರ ಹಾಗೂ ಮಾಹಿತಿ ಎಂದರು.

ಜಿಲ್ಲಾ ಉಪ್ಪಾರ ಸಂಘದ ಅಧ್ಯಕ್ಷ ಸಿ.ಎಸ್.ಮಂಜುನಾಥ ಮಾತನಾಡಿ, ಜಿಲ್ಲಾ ರಕ್ಷಣಾಧಿಕಾರಿಯಾಗಿ ಅಶೋಕ್ ತುಮಕೂರು ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಉತ್ತಮ ಕಾರ್ಯದ ಮೂಲಕ ಎಲ್ಲರಿಗೂ ಮಾರ್ಗದರ್ಶಿಯಾಗಿದ್ದಾರೆಂದರು.



ಅಭಿಮಾನಿಗಳ ಪರವಾಗಿ ಎಲ್‌ಐಸಿ ದುಗ್ಗಾವರ ರಂಗಸ್ವಾಮಿ ಶಾಲು ಹೊದಿಸಿ ಗೌರವಿಸಿ ಮಾತನಾಡಿ, ಪೊಲೀಸ್ ಇಲಾಖೆ ಸದಾಕಾಲ ಜನರ ಬೆನ್ನಹಿಂದೆ ಕಾವಲಾಗಿರುತ್ತದೆ.

ಯಾವುದೇ ಘಟನೆ ನಡೆದರೂ ಅದಕ್ಕೆ ಪೊಲೀಸರು ಸುಲಭವಾಗಿ ಪರಿಹಾರ ನೀಡುವ ಜೊತೆಗೆ ಸಮಾಜದಲ್ಲಿ ಶಾಂತಿಯನ್ನು ಕಾಪಾಡುತ್ತಾರೆ. ನಾವು ಸದಾಕಾಲ ಪೊಲೀಸ್ ಇಲಾಖೆಗೆ ವಿಶೇಷ ಗೌರವ ಸಲ್ಲಿಸಬೇಕು. ಅಶೋಕ್ ತುಮಕೂರು ಸೇರಿದಂತೆ ಹಲವಾರು ಜಿಲ್ಲೆಗಳಲ್ಲಿ ಉತ್ತಮ ಕಾರ್ಯದ ಮೂಲಕ ಹೆಸರು ಮಾಡಿದ್ದಾರೆ ಎಂದರು. ಈ ಸಂದರ್ಭದಲ್ಲಿ ಕೆ.ಎಲ್.ನಾಗರಾಜು, ಲಕ್ಷ್ಮಣ, ಜಿ.ಶ್ರೀನಿವಾಸ್, ಕೆ.ಪಿ.ಚನ್ನಪ್ಪ, ಗಜೇಂದ್ರ, ಡಾ.ಆರ್.ರಾಜು, ಮಹದೇವಪ್ಪ, ನಾಗಪ್ಪ ಮುಂತಾದವರು ಇದ್ದರು.

# ತಮಿಳುನಾಡಿಗೆ ಸರ್ಕಾರ ನೀರು ಬಿಟ್ಟರೆ ಕುಡಿವ ನೀರಿಗೂ ಸಮಸ್ಯೆ



» ಮೊದಲ ಪುಟದಿಂದ

ವಾಡಿಕೆಯಂತೆ ಮಳೆ ಆಗಿಲ್ಲ, ಈಗಾಗಲೇ 14 ತಾಲೂಕುಗಳ ಪ್ರತಿ 102 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ವಿಶೇಷವಾಗಿ ಅವರಿ ಕಣಿವೆ ಭಾಗದಲ್ಲಿ ತೀವ್ರ ಸ್ವರೂಪದ ಬರದ ಸ್ಥಿತಿ ನಿರ್ಮಾಣವಾಗಿದೆ. ಕೃಷ್ಣರಾಜಸಾಗರ ಜಲಾಶಯದಲ್ಲಿ, ಉಳಿದಿರುವುದು ಕೇವಲ 20 ಟಿಎಂಸಿ ನೀರು, ಅದರಲ್ಲಿ ಬಳಕೆಗೆ ಸಿಗುವುದು ಕೇವಲ 15 ಟಿಎಂಸಿ ನೀರು ಮಾತ್ರ ಇಂಥ ಸಂದರ್ಭದಲ್ಲಿ ಕಾವೇರಿ ನದಿ ನೀರು ನಿರ್ವಹಣೆ ಪ್ರಾಧಿಕಾರ ಸುಮಾರು 7 ಟಿಎಂಸಿಯಷ್ಟು ನೀರು ತಮಿಳುನಾಡಿಗೆ ಹರಿಸಲು ಆದೇಶಿಸಿರುವುದು ಆಶ್ಚರ್ಯಕರವಾಗಿದೆ, ಆಘಾತಕಾರಿಯಾಗಿದೆ.

ಕಾವೇರಿ ನಿರ್ವಹಣಾ ಪ್ರಾಧಿಕಾರದ ಆದೇಶವನ್ನು ರಾಜ್ಯ ಸರ್ಕಾರ ಯಾವ ಕಾರಣಕ್ಕೂ ಪಾಲಿಸಬಾರದು. ನಾಡಿನ ಜನರ ಜೀವಗಳಿಗಿಂತ ಯಾವುದೋ ಪ್ರಾಧಿಕಾರದ ಆದೇಶ ದೊಡ್ಡದಾಗಲು ಹೇಗೆ ಸಾಧ್ಯ? ಈ ಪ್ರಾಧಿಕಾರದ ಆದೇಶ ಪಾಲಿಸಲು ಹೋಗಿ ಅವರು ಕೇಳಿದಷ್ಟು ನೀರನ್ನು ಇದುವರೆಗೆ ಬಿಟ್ಟಿದ್ದೇ ರಾಜ್ಯ ಸರ್ಕಾರದ ದೊಡ್ಡ, ತಪ್ಪು ಈಗಲೂ ಸರ್ಕಾರ ಸ್ಪಷ್ಟ ಧೋರಣೆಯನ್ನು ಪ್ರಕಟಿಸಿದಂತೆ ಕಾಣುತ್ತಿಲ್ಲ, ಈಗಲಾದರೂ ರಾಜ್ಯ ಸರ್ಕಾರ ಅಡ್ಡಗೋಡೆಯ ಮೇಲೆ ದೀಪ ಇಟ್ಟಂತೆ ಮಾಡುವುದನ್ನು ಬಿಟ್ಟು ಯಾವುದೇ ಕಾರಣಕ್ಕೂ ನೀರು ಬಿಡುವುದಿಲ್ಲ ಎಂಬ ದೃಢ ಘೋಷಣೆಯನ್ನು ಮಾಡಬೇಕು ಎಂದು ಒತ್ತಾಯಿಸಿ ಒಂದೊಮ್ಮೆ ಸರ್ಕಾರ ಅಂಥ ದುಸ್ಸಾಹಸಕ್ಕೆ ಕೈಹಾಕಿದರೆ ರಾಜ್ಯದ ಜನರು ನಿರ್ಮಾಣವಾಗುತ್ತದೆ. ಕರ್ನಾಟಕ ರಕ್ಷಣಾ ವೇದಿಕೆ, ಚಿತ್ರದುರ್ಗ ಜಿಲ್ಲಾ ಘಟಕದಿಂದ ಚಿತ್ರದುರ್ಗ ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಎಚ್ಚರಿಕೆ ನೀಡಲಾಯಿತು.

ಜಿಲ್ಲಾಧ್ಯಕ್ಷ ಟಿ.ರಮೇಶ್, ರಾಜಪ್ಪ, ಎಲ್.ಎಂ.ವಿಜಯಕುಮಾರ್, ಪಿ.ರಮೇಶ್, ಎಸ್.ಬಿ.ಗಣೇಶ್, ಶಿವಮೂರ್ತಿ, ಬಿ.ವೆಂಕಟೇಶ್ ಇದ್ದರು.



ಚಳ್ಳಕೆರೆ ನಗರದ ತಾಲ್ಲೂಕು ಕಚೇರಿ ಮುಂಭಾಗದ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ನಮನ ಸಲ್ಲಿಸಿದರು. ತಹಶೀಲ್ದಾರ್ ರೇಹಾನ್ ಪಾಷ, ವೀರಭದ್ರಪ್ಪ, ವಿಜಯಕುಮಾರ್, ಭದ್ರಿ ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.



ಚಳ್ಳಕೆರೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಗೆ ಪ್ರಾಚಾರ್ಯ ಎಂ.ರವೀಶ್ ಚಾಲನೆ ನೀಡಿದರು. ನಾಗರಾಜು ಬೆಳಗಟ್ಟ, ಜಬೀವುಲ್ಲಾ, ಬಿ.ಶಾಂತಕುಮಾರಿ, ಪುಷ್ಪಲತಾ, ಚಂದ್ರಶೇಖರ್ ಇದ್ದರು.

## ಪ್ರಮುಖ ಸುದ್ದಿ

# ಗೌರವಧನ ಹೆಚ್ಚಳಕ್ಕೆ ಅಂಗನವಾಡಿ ಕಾರ್ಯಕರ್ತೆಯರ ಆಗ್ರಹ

» ಚಿತ್ರದುರ್ಗ

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಗೌರವಧನ ಹೆಚ್ಚಳದ 6ನೇ ಗ್ಯಾರಂಟಿ ಜಾರಿಗೊಳಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಫೇಡರೇಷನ್ ಜಿಲ್ಲಾ ಸಮಿತಿ ಪ್ರತಿಭಟನೆ ನಡೆಸಿತು.

ನಗರದ ದಾವಣಗೆರೆ ರಸ್ತೆಯ ಕಚೇರಿಯಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಪ್ರತಿಭಟನಾ ಮೆರವಣಿಗೆಯನ್ನು ನಡೆಸಿದ ಅಂಗನವಾಡಿ ಕಾರ್ಯಕರ್ತೆಯರಮತ್ತುಸಹಾಯಕಿಯರ ದಾರಿಯುದ್ದಕ್ಕೂ ಘೋಷಣೆಗಳನ್ನು ಕೂಗುತ್ತಾ,ಬೇಡಿಕೆಯನ್ನು ಈಡೇರಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿಯಲ್ಲಿ ಕಳೆದ 48 ವರ್ಷಗಳಿಂದ ಶೂನ್ಯದಿಂದ 4 ವರ್ಷ ವಯೋಮಾನದ ಮಕ್ಕಳಿಗಾಗಿ ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಮೂಲಕ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ಆರೋಗ್ಯ, ಲಾಲನೆ-ಪಾಲನೆ, ಪೌಷ್ಠಿಕ ಆಹಾರ, ಶಾಲಾಪೂರ್ವ ಶಿಕ್ಷಣ ಇತ್ಯಾದಿ ಸೇವೆಗಳನ್ನು ನಡೆಸಿಕೊಂಡು ಬರಲಾಗುತ್ತಿದೆ. ಆದರೆ ಇದೀಗ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಎಲ್ಲಿ ಅಂಗನವಾಡಿ ಕೇಂದ್ರಗಳು ಕಾರ್ಯ ನಿರ್ವಹಿಸುತ್ತೀವೆಯೋ ಅದೇ ಪ್ರದೇಶಗಳಲ್ಲಿ ಶಿಶುಪಲಾನಾ ಕೇಂದ್ರಗಳನ್ನು ಶಾಲಾ ಪೂರ್ವ ತರಗತಿಗಳನ್ನು ಪ್ರಾರಂಭಿಸಲು ಮುಂದಾಗಿರುವುದು ಅಂಗನವಾಡಿ ಕೇಂದ್ರಗಳ ಮೇಲೆ ಗಂಭೀರ ಪರಿಣಾಮ ಬೀರುತ್ತಿದೆ ಎಂದು ದೂರಿದ್ದಾರೆ.

ಅದೇ ರೀತಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನರೇಗಾ ಯೋಜನೆಯಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಶಿಶುಪಾಲನಾ ಕೇಂದ್ರಗಳನ್ನು ಪ್ರಾರಂಭಿಸಲು ಸಿದ್ಧತೆಗಳನ್ನು ಭರದಿಂದ - ನಡೆಸಲಾಗಿದೆ. : ಈ ಬಗ್ಗೆ ಆಯಾ ಇಲಾಖೆಗಳು ಸುತ್ತೋಲೆಗಳನ್ನು ಹೊರಡಿಸಿ, ಅಂಗನವಾಡಿಗಳು ನಿರ್ವಹಿಸಬೇಕಾದ ಕೆಲಸಗಳನ್ನು ಪರ್ಯಾಯವಾಗಿ ಮಾಡಲು ಹೊರಟರೆ ಹಂತ-ಹಂಶವಾಗಿ ಅಂಗನವಾಡಿಗಳಿಗೆ ಬರುವ ಮಕ್ಕಳ ಸಂಖ್ಯೆ ಕಡಿಮೆಯಾಗಿ ಅಥವಾ ಅಂಗನವಾಡಿ ಕೇಂದ್ರಕ್ಕೆ ಮಕ್ಕಳು ಬಾರದೆ ಅಂಗನವಾಡಿಗಳು ದುರ್ಬಲಗೊಳ್ಳುವ ಅಥವಾ ಮುಚ್ಚುವ ಆತಂಕ ಎದುರಾಗಿದೆ.

ಆದುದರಿಂದ ಒಂದು ಸದೃಢವಾದ ಆಂಗನವಾಡಿ ವ್ಯವಸ್ಥೆ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುತ್ತಿರುವಾಗ ಅದಕ್ಕೆ ಪರ್ಯಾಯವಾಗಿ ಬೇರೆ ಬೇರೆ ಇಲಾಖೆಗಳು ಶಿಶುಪಾಲನಾ ಕೇಂದ್ರ ಮತ್ತು ಶಾಲಾಪೂರ್ವ ತರಗತಿಗಳನ್ನು ಪ್ರಾರಂಭಿಸಿದರೆ ಅನಗತ್ಯವಾಗಿ ಸರ್ಕಾರದ ಹಣ ಪೋಟಗೊಳಿಸುತ್ತಿರುವ ಧೋರಣೆ ಸರಿಯಾದುದಲ್ಲ, ಶ್ರೀಮತಿ ಪ್ರಿಯಾಂಕ ಗಾಂಧಿಯವರು ಬೆಳಗಾವಿ ಜಿಲ್ಲೆಯ ಖಾನಾಪುರದಲ್ಲಿ ಅಂಗನವಾಡಿ ಸಂಘಟನೆಯ ಸಮಾಲೋಚಿಸಿ ಗೌರವಧನವನ್ನು ಸಹಾಯಕಿಯರಿಗೆ 10 ಸಾವಿರ ಹೆಚ್ಚಿಸುವ ಹಾಗೂ ನಿವೃತ್ತರಿಗೆ ಇಡುಗಂಟು 3 ಲಕ್ಷ ರೂಪಾಯಿ ನೀಡುವ ಕಾರ್ಯಕರ್ತೆಯರಿಗೆ 15 ಸಾವಿರ, ಭರವಸೆಯನ್ನು ಸರ್ಕಾರದ 6ನೇ ಗ್ಯಾರಂಟಿಯಾಗಿ ಘೋಷಿಸಿದ್ದು, ಇದನ್ನು ರಾಜ್ಯ ಸರ್ಕಾರ ಕೂಡಲೇ ಘೋಷಿಸಿರುವ ಭರವಸೆಯನ್ನು ಈಡೇರಿಸಲು ಕ್ರಮವಹಿಸಬೇಕು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಗ್ರಾಚ್ಯುಟಿ ಪಡೆಯಲು ಅರ್ಹರು ಎಂಬ ಸುಪ್ರೀಂ ಕೋರ್ಟ್ ತೀರ್ಪನ್ನು ಎಲ್ಲಾ ನಿವೃತ್ತರಿಗೂ ಅನ್ವಯವಾಗುವಂತೆ ಜಾರಿಗೊಳಿಸಲು ಆಡಳಿತಾತ್ಮಕವಾಗಿ ಕ್ರಮ ವಹಿಸಬೇಕೆಂದು ಒತ್ತಾಯಿಸುತ್ತೇವೆ.



ಅಂಗನವಾಡಿ ವ್ಯವಸ್ಥೆಗೆ ವಿರುದ್ಧವಾಗಿ ಹಾಗೂ ಪರ್ಯಾಯವಾಗಿ ಶಿಶುಪಾಲನಾ ಕೇಂದ್ರಗಳು ಮತ್ತು ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಲು ರಾಜ್ಯ ಸರ್ಕಾರದ ವಿವಿಧ ಇಲಾಖೆಗಳು ಹೊರಡಿಸಿರುವ ಆದೇಶಗಳನ್ನು ವಾಪಸ್ಸು ಪಡೆದು ಅಂಗನವಾಡಿ ಕೇಂದ್ರಗಳಲ್ಲಿಯೇ ಶಾಲಾಪೂರ್ವ ತರಗತಿಗಳನ್ನು ನಡೆಸಲು ವಿಶೇಷ ಸವಲತ್ತುಗಳನ್ನು ಒದಗಿಸಬೇಕು, ಅಂಗನವಾಡಿಕೇಂದ್ರದಕಟ್ಟಡಗಳ10ತಿಂಗಳ ಬಾಡಿಗೆಯನ್ನು ಬಿಡುಗಡೆಗೊಳಿಸಬೇಕು. ಅಂಗನವಾಡಿಗೆ ಸರಬರಾಜು ಆಗುವ ಗ್ಯಾಸ್ ಸಿಲಿಂಡ 9 ತಿಂಗಳ ಹಣವನ್ನು ಬಿಡುಗಡೆಗೊಳಿಸಬೇಕು, ಅಂಗನವಾಡಿ ಕಾರ್ಯಕರ್ತೆಯರನ್ನು ಬಿ.ಎಲ್.ಓ ಕೆಲಸದಿಂದ ಮುಕ್ತಗೊಳಿಸಬೇಕು ಎಂದು ಒತ್ತಾಯಿಸಲಾಯಿತು.

ಎ.ಐ.ಟಿ.ಯು.ಸಿಯ ತಾಲ್ಲೂಕು ಅಧ್ಯಕ್ಷ ಬಿ.ಬಸವರಾಜಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಸಿ.ಸುರೇಶ್ ಬಾಬು, ರಾಜ್ಯ ಉಪಾಧ್ಯಕ್ಷ ಟಿ.ಆರ್.ಉಮಾಪತಿ ಆ.ಕಾಮತ್ತು ಸ.ಫೆ ಜಿಲ್ಲಾ ಅಧ್ಯಕ್ಷ ಕಾಂ ಭಾಗ್ಯಮ್ಮ ಜಿಲ್ಲಾ ಉಪಾಧ್ಯಕ್ಷ ಕಾಂ ಜಮುನಾಬಾಯಿ ಜಿಲ್ಲಾ ಸಂ. ಕಾರ್ಯದರ್ಶಿ ಸಾವಿತ್ರಮ್ಮ ಎ.ಐ.ಟಿ.ಯು.ಸಿ ಸಂಘಟನಾ ಕೆ.ಈ ಸತ್ಯಕೀರ್ತಿ ಕಾರ್ಯದರ್ಶಿ ಜಿಲ್ಲಾ ಮುಖಂಡರು ರಾಧಮ್ಮ ತಾಲ್ಲೂಕು ಸಹ ಕಾರ್ಯದರ್ಶಿ ಎ.ಐ.ಟಿ.ಯು.ಸಿ, ಕಾಂ ಎಂ.ಬಿ.ಜಯದೇವ ಮೂರ್ತಿ ವಹಿಸಿದ್ದರು.

## ಫಾಸ್ಟ್ ನ್ಯೂಸ್

### ಸೆ.23 ಮತ್ತು 24ರಂದು ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಕ್ರೀಡಾ ಪ್ರಾಧಿಕಾರ ಮತ್ತು ವಿವಿಧ ಕ್ರೀಡಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 2023-24ನೇ ಸಾಲಿನ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಇದೇ ಸೆಪ್ಟೆಂಬರ್ 23 ಮತ್ತು 24 ರಂದು ಬೆಳಿಗ್ಗೆ 9 ಗಂಟೆಯಿಂದ ಚಿತ್ರದುರ್ಗ ನಗರದ ವೀರವನಿತೆ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಏರ್ಪಡಿಸಲಾಗಿದೆ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವವರು ಆಯಾ ತಾಲ್ಲೂಕಿನಲ್ಲಿ ನಡೆದ 2023-24ನೇ ಸಾಲಿನ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟದಲ್ಲಿ ವಾಲಿಬಾಲ್, ಕಬಡ್ಡಿ, ಖೋಖೋ, ಫುಟ್‌ಬಾಲ್, ಥ್ರೋಬಾಲ್ ಕ್ರೀಡೆಗಳಲ್ಲಿ ಪ್ರಥಮ ಸ್ಥಾನವನ್ನು ಪಡೆದ ಮತ್ತು ಅಥ್ಲೆಟಿಕ್ಸ್‌ನ ವೈಯುಕ್ತಿಕ ಕ್ರೀಡೆಯಲ್ಲಿ ಪ್ರಥಮ ಮತ್ತು ದ್ವಿತೀಯ, ಗುಂಪು ಆಟಗಳಲ್ಲಿ ಪ್ರಥಮ ಸ್ಥಾನ ಪಡೆದ ಕ್ರೀಡಾಪಟುಗಳು ಮಾತ್ರ ಜಿಲ್ಲಾ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಲು ಅರ್ಹರಾಗಿರುತ್ತಾರೆ.

ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸುವವರಿಗೆ ತಾಲ್ಲೂಕು ಕೇಂದ್ರಸ್ಥಾನದಿಂದ ಜಿಲ್ಲಾ ಕೇಂದ್ರಸ್ಥಾನಕ್ಕೆ ಹೋಗಿ ಬರುವ ಪ್ರಯಾಣ ಭತ್ಯೆ ಮತ್ತು ದಿನಭತ್ಯೆ ನೀಡಲಾಗುವುದು.

ಚಿತ್ರದುರ್ಗ ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟದಲ್ಲಿ ನೇರವಾಗಿ ಯೋಗ, ಬ್ಯಾಸ್ಕೇಟ್‌ಬಾಲ್, ಕುಸ್ತಿ, ಬ್ಯಾಡ್ಮಿಂಟನ್, ಹಾಕಿ, ಹ್ಯಾಂಡ್‌ಬಾಲ್, ಟೇಬಲ್ ಟೆನ್ನಿಸ್, ಬಾಲ್ ಬ್ಯಾಡ್ಮಿಂಟನ್ ಕ್ರೀಡೆಯನ್ನು ಸಂಘಟಿಸಲಾಗುವುದು ಹಾಗೂ ಟೆನ್ನೀಸ್, ನೆಟ್‌ಬಾಲ್ ಮತ್ತು ಈಜು ಕ್ರೀಡೆಯಲ್ಲಿ ವಿಭಾಗಮಟ್ಟಕ್ಕೆ ಆಯ್ಕೆಯನ್ನು ಮಾಡಲಾಗುವುದು.

ನೇರವಾಗಿ ಜಿಲ್ಲಾ ಮಟ್ಟದಲ್ಲಿ ನಡೆಯುವ ಕ್ರೀಡೆಗಳಲ್ಲಿ ಭಾಗವಹಿಸುವವರಿಗೆ ಯಾವುದೇ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ನೀಡಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-235635 ಗೆ ಸಂಪರ್ಕಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನ ಆಚರಣೆ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಭಾರತದ ಸಂವಿಧಾನ ಪೀಠಿಕೆಯ ವಾಚನ ಮಾಡಲಾಯಿತು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಸಂವಿಧಾನ ಪೀಠಿಕೆ ವಾಚನ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ್, ವಿಷಯ ನಿರ್ವಾಹಕ ಮಲ್ಲಿಕಾರ್ಜುನ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಶ್ರೀಧರ್, ಗಂಗಾಧರೆಡ್ಡಿ, ಕಚೇರಿ ವ್ಯವಸ್ಥಾಪಕ ಮಹಮದ್ ಅಲಿ, ಅಕೌಂಟೆಂಟ್ ಹಬೀಬ್, ಹಿರಿಯ ಆರೋಗ್ಯ ಸುರಕ್ಷತಾ ಅಧಿಕಾರಿ ಕಾತ್ಯಾಯನಮ್ಮ, ಗಣಕಯಂತ್ರ ನಿರ್ವಾಹಕರಾದ ನಾಗವೇಣಿ, ಪ್ರತಿಭಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ, ವಾಹನ ಚಾಲಕ ರಮೇಶ್, ಕ್ಷಯರೋಗ ವಿಭಾಗದ ಸಿಬ್ಬಂದಿಗಳಾದ ಮಹೇಂದ್ರ, ಮಾರುತಿ, ಲೋಕೇಶ್, ಜಬ್ಬಾರ್ ಇತರರು ಉಪಸ್ಥಿತರಿದ್ದರು.

### ಅಕ್ಟೋಬರ್ 1 ರಂದು ರಾಜ್ಯ ಸರ್ಕಾರಿ ನೌಕರರ ವಿಶೇಷ ಮಹಾಸಭೆ

» ದಾವಣಗೆರೆ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು ಇದರ 2022 ರ ಉಪವಿಧಿಗಳನ್ನು ತಿದ್ದುಪಡಿ ಮಾಡಲು ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್. ಷಡಾಕ್ಷರಿ ಇವರ ಅಧ್ಯಕ್ಷತೆಯಲ್ಲಿ ವರ್ಚುವಲ್ ವಿಧಾನದ ಮೂಲಕ ಸರ್ವ ಸದಸ್ಯರ ವಿಶೇಷ ಮಹಾಸಭೆಯನ್ನು ಆಯೋಜಿಸಲಾಗಿದೆ. ಅಕ್ಟೋಬರ್ 1 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲೆಯ ಹಿರೇಸಿಂದೋಗಿ ರಸ್ತೆಯಲ್ಲಿರುವ ಮಹಾವೀರ ಸಮುದಾಯ ಭವನದಲ್ಲಿ ಸಭೆಯನ್ನು ಏರ್ಪಡಿಸಿದ್ದು, ಸಂಘದ ಸರ್ವ ಸದಸ್ಯರು ಭಾಗವಹಿಸಲು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ದಾವಣಗೆರೆ ಜಿಲ್ಲಾಧ್ಯಕ್ಷ ವೀರೇಶ್ ಎಸ್. ಒಡೇನಪುರ ತಿಳಿಸಿದ್ದಾರೆ.

# ರಾಜ್ಯದ ಮಹಿಳೆಯರಿಗೆ ಗ್ಯಾರೆಂಟಿ ಬಲ

» ಚಿತ್ರದುರ್ಗ



ವಿಧಾನಸಭೆ ಮತ್ತು ಲೋಕಸಭೆಯಲ್ಲಿ ಮಹಿಳೆಯರಿಗೆ ಶೇ.33 ರಷ್ಟು ಮೀಸಲಾತಿಯನ್ನು ನೀಡುವ ಮಸೂದೆಯನ್ನು ಮುಂದಿನ ಅಧಿವೇಶನದಲ್ಲಿ ಪಾಸ್ ಮಾಡುವುದರ ಮೂಲಕ ಮಹಿಳೆಯರಿಗೆ ಬಲವನ್ನು ತುಂಬಬೇಕಿದೆ ಎಂದು ಚಿತ್ರದುರ್ಗ ಮಹಿಳಾ ಕಾಂಗ್ರೆಸ್ ಘಟಕದ ಜಿಲ್ಲಾಧ್ಯಕ್ಷೆ ಗೀತಾ ನಂದಿನಿ ಗೌಡ ಪಕ್ಷದ ವರಿಷ್ಠರನ್ನು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಶುಕ್ರವಾರ ನಡೆದ 40ನೇ ಅಖಿಲ ಭಾರತ ಮಹಿಳಾ ಕಾಂಗ್ರೆಸ್ ಸಂಸ್ಥಾಪನ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಾನು 2007ರಿಂದ ಮಹಿಳಾ ಘಟಕದ ಅಧ್ಯಕ್ಷರಾಗಿ ಕೆಲಸವನ್ನು ವಿವಿಧ ರೀತಿಯ ಕಷ್ಟಗಳನ್ನು ಅನುಭವಿಸಿ ಪಕ್ಷವನ್ನು ಸಂಘಟಿಸಲಾಗಿದೆ. ಇಂದು ಮಹಿಳಾ ಕಾಂಗ್ರೆಸ್ ಇಷ್ಟರ ಮಟ್ಟಿಗೆ ಬೆಳೆಯಲು ಪಕ್ಷದ ಹಲವಾರು ಮಹಿಳೆಯರು ಕಾರಣರಾಗಿದ್ದಾರೆ. ಇದಕ್ಕೆ ಇಂದಿನ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಾದ ಡಿ.ಕೆ.ಶಿವಕುಮಾರ್ ಉತ್ತೇಜವನ್ನು ನೀಡಿದ್ದಾರೆ ಎಂದರು.

ನಮ್ಮ ನಾಯಕಿಯಾದ ಸೋನಿಯಾ ಗಾಂಧಿ ಮತ್ತು ಪ್ರಿಯಾಂಕ ಗಾಂಧಿಯವರು ನಮ್ಮಗೆ ಬೆಂಬಲವಾಗಿ ನಿಂತಿದ್ದಾರೆ. ಮಹಿಳೆ ಅಬಲೆ ಅಲ್ಲ ಸಬಲೆ ಎಂದು ತೋರಿಸಿದ್ದಾರೆ. ರಾಣಿ ಸತೀಶ್, ಮೋಟಮ್ಮ, ಚಂದ್ರಪ್ರಭ ಆರಸ್ ಸೇರಿದಂತೆ ಇತರೆ ಹಲವಾರು ಜನತೆ ನಮ್ಮ ಪಕ್ಷದ ಅದರಲ್ಲೂ ಮಹಿಳಾ ಘಟಕದ ಅಧ್ಯಕ್ಷರಾಗಿ ಉತ್ತಮವಾದ ಕಾರ್ಯವನ್ನು ಮಾಡುವುದರಮೂಲಕಮಹಿಳಾಕಾಂಗ್ರೆಸ್ ಬೆಳೆಯಲು ಸಹಕಾರಿಯಾಗಿದ್ದಾರೆ. ಬೂತ್ ಮಟ್ಟದಿಂದ ಪಕ್ಷ ಬೆಳೆಯಲು ನೆರವಾಗಿದ್ದಾರೆ. ಮಹಿಳೆಯರಿಗೆ ಮತ್ತಷ್ಟು ಬಲ ಬರಲು ಮೀಸಲಾತಿ ಅಗತ್ಯವಾಗಿದೆ ಈ ಹಿನ್ನಲೆಯಲ್ಲಿ ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿಯನ್ನು ನೀಡುವ ಮಸೂದೆಗೆ ಲೋಕಸಭೆಯಲ್ಲಿ ಮುಂಬರುವ ಕಾಂಗ್ರೆಸ್ ಸರ್ಕಾರ ಪಾಸ್ ಮಾಡುವಂತೆ ಗೀತಾ ನಂದಿನಿ ಗೌಡ ಪಕ್ಷದ ವರಿಷ್ಟರನ್ನು ಆಗ್ರಹಿಸಿದ್ದಾರೆ.

ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಮತದಾರರಿಗೆ ನೀಡಿದ ಗ್ಯಾರೆಂಟಿಗಳು ಮಹಿಳೆಯರಿಗೆ ಬಲವನ್ನು ತುಂಬಿದೆ.

ಗೃಹಲಕ್ಷ್ಮೀ ಯೋಜನೆಯಿಂದ ಮನೆಯ ಮಹಿಳೆಯರಿಗೆ ಬಲವನ್ನು ತುಂಬಲಾಗಿದೆ, ಗೃಹಶಕ್ತಿ ಯೋಜನೆಯಲ್ಲಿ ರಾಜ್ಯದಲ್ಲಿ ಎಲ್ಲಿಬೇಕಾದರೂ ಉಚಿತವಾಗಿ ಓಡಾಡುವ ಅವಕಾಶವನ್ನು ನೀಡಲಾಗಿದೆ. ಇದರಿಂದ ಬಡವರಿಗೆ ಅನುಕೂಲವಾಗಿದೆ. ಗೃಹಜ್ಯೋತಿ ಯೋಜನೆಯಿಂದ ಮನೆಯಲ್ಲಿ ಬೆಳಕು ಆರದಂತೆ ಸರ್ಕಾರ ಮಾಡಿದೆ, ಪಡಿತರ ವ್ಯವಸ್ಥೆಯಲ್ಲಿ 5 ಕೆಜಿ ಅಕ್ಕಿ ಸಿಕ್ಕರೆ ಉಳಿದ ಅಕ್ಕಿಗೆ ಹಣವನ್ನು ನೀಡುತ್ತಿದ್ದು ಇದರಿಂದ ಬೇರೆ ವಸ್ತುಗಳ ಖರೀದಿಗೆ ಅನುಕೂಲವಾಗಿದೆ, ಯುವ ಜನಾಂಗವನ್ನು ಸಬಲಿಕರಣ ಮಾಡುವುದಕ್ಕಾಗಿ ಯುವ ನಿಧಿಯನ್ನು ಸರ್ಕಾರ ನೀಡುತ್ತಿದೆ ಈ ರೀತಿಯಾದ ಯೋಜನೆಗಳನ್ನು ರಾಜ್ಯದಲ್ಲಿ ಜಾರಿ ಮಾಡಿದ ಕಾಂಗ್ರೆಸ್ ಸರ್ಕಾರ ಮತದಾರರ ಒಲವನ್ನು ಗಳಿಸಿದೆ ಎಂದರು.

ಲಕ್ಷ್ಮೀಕಾಂತ ಮಾತನಾಡಿ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳು ಗೆಲುವನ್ನು ಸಾಧಿಸಲು ಕಾರ್ಯಕರ್ತರ ಅಗತ್ಯ ಇತ್ತು ಇದಾದ ಮೇಲೆ ಸರ್ಕಾರ ರಚನೆಯಾಯಿತು. ನಂತರ ಗೆದ್ದ ಶಾಸಕರಲ್ಲಿ ಕೆಲವರನ್ನು ಸಚಿವರನ್ನಾಗಿ ಮಾಡಲಾಯಿತು. ಇದಾದ ಮೇಲೆ ಪಕ್ಷದ ಕಾರ್ಯಕರ್ತರನ್ನು ಕಡೆಗಣಿಸಲಾಗಿದೆ. ಅವರಿಗೆ ಸಿಗಬೇಕಾದ ಸ್ಥಾನ ಸಿಕ್ಕಿಲ್ಲ, ಶಾಸಕರಾದವರು ಕಾರ್ಯಕರ್ತರನ್ನು ಮರೆತ್ತಿದ್ದಾರೆ, ಅವರನ್ನು ಕಡೆಗಣಿಸಿದ್ದಾರೆ, ಅವರ ಕೆಲಸಗಳು ಆಗುತ್ತಿಲ್ಲ, ಈ ರೀತಿಯಾದರೆ ಮುಂಬರುವ ಲೋಕಸಭೆಯಲ್ಲಿ ಪಕ್ಷದ ಅಭ್ಯರ್ಥಿ ಗೆಲುವು ಸಾಧಿಸಲಿಕ್ಕೆ ತೊಂದರೆಯಾಗಬಹುದೆಂದು ಪಕ್ಷದ ವರಿಷ್ಠರ ಗಮನಕ್ಕೆ ತರಬೇಕೆಂದು ಆಗ್ರಹಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಿಸಿಸಿ ಅಧ್ಯಕ್ಷರಾದ ತಾಜ್‌ಪೀರ್ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮೈಲಾರಪ್ಪ, ಪ್ರಸನ್ನ ಕುಮಾರ್, ಪ್ರಕಾಶ್ ರಾಮನಾಯ್ಕ್, ಉಲ್ಲಾಸ ಕಾರೇಹಳ್ಳಿ, ತಿಪ್ಪೇಸ್ವಾಮಿ, ಸಂಪತ್ ಕುಮಾರ್, ಜಾಹ್ನವಿ ನಾಗರಾಜ್, ಮೀನಾಕ್ಷಿ, ಮೋಕಾ ರುದ್ರಸ್ವಾಮಿ, ಮುದಸಿರ್ ನವಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಬರ ನಿವಾರಣೆಗೆ ಸರ್ಕಾರದ ಸಂಕಲ್ಪ: ಸಚಿವ

» ಚಳ್ಳಕೆರೆ




ಬೆಂಗಳೂರಿನ ಯಲಹಂಕ ವ್ಯಾಪ್ತಿಯ ದಲಿತ ಕುಟುಂಬಕ್ಕೆ ಭೂಮಿ ವಂಚನೆ ಪ್ರಕರಣದಲ್ಲಿ ಕಳೆದ ಸುಮಾರು ಒಂದುವಾರದಿಂದ ಬಾರಿ ಸುದ್ದಿಯಲ್ಲಿರುವ ಜಿಲ್ಲೆಯ ಉಸ್ತುವಾರಿ ಸಚಿವ ಡಿ.ಸುಧಾಕರ್ ಶುಕ್ರವಾರ ನಾಯಕನಹಟ್ಟಿಯ ಶ್ರೀಗುರು ತಿಪ್ಪೇರುದ್ರಸ್ವಾಮಿ ದೇವಸ್ಥಾನಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ದೇವಸ್ಥಾನದಿಂದ ಹೊರಗೆ ಆಗಮಿಸಿದ ಸಚಿವ ಡಿ.ಸುಧಾಕರ್ ಮಾಧ್ಯಮದರೊಂದಿಗೆ ಮಾತನಾಡಿ, ಕರ್ನಾಟಕದ ಲಕ್ಷಾಂತರ ಭಕ್ತರ ಆರಾಧ್ಯದೈವವಾದ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿಯ ಆಶೀರ್ವಾದಿಂದ ನಾನು ಇಂದು ಸಚಿವನಾಗಿ ಅಧಿಕಾರ ಪಡೆದು ಸೇವೆಯಲ್ಲಿ ತೊಡಗಿದ್ದೇನೆ. ಪ್ರಸ್ತುತ ವರ್ಷ ಮಳೆ ಕಡಿಮೆಯಾಗಿ ಈ ಭಾಗದಲ್ಲಿ ಬರ ಆವರಿಸಿದ್ದು, ಸರ್ಕಾರ ಬರಗಾಲದ ಸ್ಥಿತಿಯನ್ನು ನಿಯಂತ್ರಿಸಲು ಸಮರೋಪಾದಿಯಲ್ಲಿ ಕಾರ್ಯನಿರ್ವಹಿಸುತ್ತಿದೆ. ರೈತರು ಸರ್ಕಾರದೊಂದಿಗೆ ಸಹಕರಿಸಬೇಕು. ನಾಡಿನ ಎಲ್ಲಾ ವರ್ಗದ ಜನರಿಗೆ ಸುಖ, ಶಾಂತಿ ನೆಮ್ಮದಿ ನೀಡುವಂತೆ ದೇವರಲ್ಲಿ ಪ್ರಾರ್ಥಿಸಿರುವುದಾಗಿ ತಿಳಿಸಿದರು.

ಜಿಲ್ಲೆಯ ಅಭಿವೃದ್ದಿಗೆ ಸಂಬಂಧಪಟ್ಟಂತೆ ಮಾತನಾಡಿದ ಅವರು, ಪ್ರಾರಂಭದಲ್ಲಿ ಚಳ್ಳಕೆರೆ ಮತ್ತು ಹಿರಿಯೂರು ತಾಲ್ಲೂಕು ಗಳನ್ನು ಬರಪೀಡಿತ ಪ್ರದೇಶವೆಂದು ಘೋಷಿಸಲು ತಾಂತ್ರಿಕ ಅಡಚರಣೆ ಇತ್ತು. ಈಗ ಅದು ನಿವಾರಣೆಯಾಗಿದೆ, ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ನಾಡಿನ ಹಲವಾರು ಜಿಲ್ಲಾ ಕೇಂದ್ರಗಳಲ್ಲಿ ಬರದ ಸ್ಥಿತಿ ತಾಂಡವಾಡುತ್ತಿದೆ. ಈಗಾಗಲೇ ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ ಮಾರ್ಗದರ್ಶನ ನೀಡಿದ್ದಾರೆ. ಯಾವುದೇ ಸಂದರ್ಭದಲ್ಲೂ ಸಾರ್ವಜನಿಕರು ಆತಂಕಕ್ಕೆ ಒಳಗಾಗದೆ ಸರ್ಕಾರದೊಂದಿಗೆ ಕೈಜೋಡಿಸುವಂತೆ ಮನವಿ ಮಾಡಿದರು.

ದೇವಸ್ಥಾನದ ಆಡಳಿತಾಧಿಕಾರಿ ಎಚ್. ಗಂಗಾಧರಪ್ಪ, ಸಿಬ್ಬಂದಿ ಎಸ್.ಸತೀಶ್, ಪಿಎಸ್‌ಐ ದೇವರಾಜು, ಕಾಂಗ್ರೆಸ್ ಮುಖಂಡರಾದ ಶಂಕರಯಾದವ್, ಮಹಮ್ಮದ್ ಯೂಸೂಪ್, ತಾರಕೇಶ್, ಸುನೀಲ್‌ಕುಮಾರ್, ದಳವಾಯಿ ರುದ್ರಮುನಿ ಉಪಸ್ಥಿತರಿದ್ದರು.

## ದಾವಣಗೆರೆ: ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ



» ದಾವಣಗೆರೆ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆಯಲ್ಲಿ ಸಂವಿಧಾನ ಪೀಠಿಕೆಯನ್ನು ಪ್ರತಿಜ್ಞಾ ವಿಧಿ ಮಾಡುವ ಮೂಲಕ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿಜಿಲ್ಲಾಕ್ರೀಡಾಂಗಣದಲ್ಲಿಜರುಗಿದಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ(ಭಾರತದ ಸಂವಿಧಾನ ಪೀಠಿಕೆಯ ಜಾಗತಿಕ ವಾಚನ ಸರ್ವಜನರ ಏಕಧ್ವನಿ) ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಉದಾತ್ತ ಚಿಂತನೆಗಳನ್ನು ಸಾರುವ ನಮ್ಮ ಸಂವಿಧಾನಕ್ಕೆ ಅದರದ್ದೇ ಆದಂತಹ ಇತಿಹಾಸವಿದೆ. ಸಂವಿಧಾನವನ್ನು ರಚಿಸಿದ ಅಂಬೇಡ್ಕರ್ ಅವರ ಮಾರ್ಗದರ್ಶನ ಮತ್ತು ಮೇಲ್ವಿಚಾರಣೆಯಲ್ಲಿ ರಚಿತವಾದ ಭಾರತ ಸಂವಿಧಾನಕ್ಕೆ ಒಳಪಟ್ಟು ದೇಶವನ್ನು ಮುನ್ನಡೆಸೋಣ ಎಂದರು.ಪ್ರಶಾಂತ್ ಮತ್ತು ಸಂಗಡಿಗರಿಂದ ನಾಡಗೀತೆ ಗಾಯನ ಹಾಗೂ ಸಿದ್ದಗಂಗಾ ಸಂಸ್ಥೆಯ 3500 ವಿದ್ಯಾರ್ಥಿಗಳು ಭಾಗವಹಿಸಿ ರಾಷ್ಟ್ರ ಧ್ವಜದ ಬಣ್ಣಗಳಾದ ಕೇಸರಿ, ಬಿಳಿ, ಹಸಿರು ಬಣ್ಣಗಳನ್ನು ಪ್ರದರ್ಶಿಸಿ ಕಾರ್ಯಕ್ರಮ ಯಶಸ್ವಿಗೊಳಿಸಿದರು.

ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಾಮಗೊಂಡ ಬಸರಗಿ, ಅಪರ ಜಿಲ್ಲಾಧಿಕಾರಿ ಪಿ.ಎನ್. ಲೋಕೇಶ್, ಜಿಲ್ಲಾ ಪಂಚಾಯತ್ ಮುಖ್ಯಾ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣ ನಾಯ್ಕ್, ಜಿಲ್ಲಾ ಉಪವಿಭಾಗಾಧಿಕಾರಿ ದುರ್ಗಾಶ್ರೀ, ಮಹಾನಗರ ಪಾಲಿಕೆ ಆಯುಕ್ತೆ ರೇಣುಕಾ, ಮೇಯರ್ ವಿನಾಯಕ ಬಿ.ಹೆಚ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ನಾಗರಾಜ. ಕೆ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ಉಪಸ್ಥಿತರಿದ್ದರು.

## ಸುಧಾಕರ್ ಅವಹೇಳನಕ್ಕೆ ಜಿಲ್ಲಾ ಕಿಸಾನ್ ಕಾಂಗ್ರೆಸ್ ಸೆಲ್ ಖಂಡನೆ

» ಚಳ್ಳಕೆರೆ



ಜಿಲ್ಲಾ ಉಸುವಾರಿ ಸಚಿವರು, ಹಿರಿಯೂರು ಕ್ಷೇತ್ರದ ಶಾಸಕರಾದ ಡಿ.ಸುಧಾಕರ್ ವಿರುದ್ದ ಯಲಹಂಕದ ದಲಿತ ಕುಟುಂಬ ನೀಡಿದ ದೂರಿನ ಹಿನ್ನೆಲೆಯಲ್ಲಿ ಸುಧಾಕರವರನ್ನು ರಾಜಕೀಯವಾಗಿ ತುಳಿಯುವ ಪ್ರಯತ್ನವನ್ನು ಕೆಲವು ರಾಜಕೀಯ ಶಕ್ತಿಗಳುಮಾಡುತ್ತಿದ್ದು,ಸುಧಾಕರ್‌ಗೆ ಸಾವಿರಾರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಹಾಗೂ ಮುಖಂಡರ ಬೆಂಬಲವಿದೆ ಎಂದು ಕಾಂಗ್ರೆಸ್ ಕಿಸಾನ್ ಸೆಲ್ ಜಿಲ್ಲಾಧ್ಯಕ್ಷ ಎ.ನಾಗರಾಜು ತಿಳಿಸಿದ್ದಾರೆ.

ಅವರು, ಪತ್ರಿಕಾ ಹೇಳಿಕೆಯಲ್ಲಿ ಇತ್ತೀಚೆಗೆ ತಾನೇ ಬಿಜೆಪಿ, ಜೆಡಿಎಸ್ ಮುಖಂಡರು ಸಚಿವ ಡಿ.ಸುಧಾಕರವರನ್ನು ಸಚಿವ ಸ್ಥಾನದಿಂದ ವಜಾ ಮಾಡಿ, ಬಂಧನ ಮಾಡುವಂತೆ ಪತ್ರಿಕಾ ಹೇಳಿಕೆ ನೀಡುತ್ತಿದ್ದಾರೆ. ಆದರೆ, ಪ್ರಕರಣ ದಾಖಲಾಗಿ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಇದು ಹಳೇಯ ಪ್ರಕರಣವಾಗಿದ್ದು, ವಿಶೇಷವಾಗಿ ಹಣಕಾಸಿನ ವಿಚಾರವಾಗಿದೆ. ಈಗಾಗಲೇ ಅವರಿಗೆ ಹಣವನ್ನು ಸಹ ಚೆಕ್ ಮೂಲಕ ನೀಡಿದ್ದರೂ ಆರೋಪ ಮಾಡಲಾಗುತ್ತಿದೆ. ಪೊಲೀಸ್ ಇಲಾಖೆಯ ತನಿಖೆ ನಂತರ ವಾಸ್ತವ ಸ್ಥಿತಿ ಎಲ್ಲರಿಗೂ ತಿಳಿಯಲಿದೆ. ಸುಮಾರು 40 ವರ್ಷಗಳಿಂದ ರಾಜಕೀಯ ಕ್ಷೇತ್ರದಲ್ಲಿ ತಮ್ಮದೇಯಾದ ವರ್ಚಸನ್ನು ಹೊಂದಿರುವ ಸುಧಾಕರವರನ್ನು ರಾಜಕೀಯವಾಗಿ ತುಳಿಯುವ ಷಡ್ಯಂತರಕ್ಕೆ ನಮ್ಮ ವಿರೋಧವಿದೆ ಎಂದು ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಸುಶಿಕ್ಷತ ಸಮಾಜ, ಪ್ರಜ್ಞಾವಂತ ವಕೀಲರ ಸಮುದಾಯ ಬಲಿಷ್ಠ ಪ್ರಜಾಸತ್ತಾತ್ಮಕದ ಹೃದಯ ಇದ್ದಂತೆ: ರಾಜೇಶ್ವರಿ ಎನ್.ಹೆಗಡೆ

» ದಾವಣಗೆರೆ




ಸುಶಿಕ್ಷಿತ ಸಮಾಜ, ಪ್ರಜ್ಞಾವಂತ ವಕೀಲ ಸಮುದಾಯವು ಬಲಿಷ್ಠ ಪ್ರಜಾಸತ್ತಾತ್ಮಕ ಸಮಾಜಗಳ ಹೃದಯ ಭಾಗದಂತೆ ಇರುತ್ತಾರೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್.ಹೆಗಡೆ ಹೇಳಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ದಾವಣಗೆರೆ, ಜಿಲ್ಲಾ ವಕೀಲರ ಸಂಘ, ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ನಗರದ ದೇವರಾಜ ಅರಸು ಬಡಾವಣೆಯ ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣದ ಜಿಲ್ಲಾ ವಕೀಲರ ಭವನದಲ್ಲಿ ನಡೆದ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಾಗೂ ಲೋಕ್ ಅದಾಲಾತ್ ಯಶಸ್ವಿಗೆ ಅಭಿನಂದನಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಇಡೀ ಪ್ರಪಂಚದಲ್ಲಿಯೇ ಅತ್ಯಂತ ದೊಡ್ಡ ಸಂವಿಧಾನವನ್ನು ಹೊಂದಿರುವ ನಮ್ಮ ದೇಶದಲ್ಲಿ ಮಾನವ ಹಕ್ಕುಗಳು, ಸಮಾನತೆ ಮತ್ತು ಸಂಘರ್ಷ, ಪರಿಹಾರಗಳಂತಹ ಜಾಗತಿಕ ಸಮಸ್ಯೆಗಳಿಗೂ ಸಮರ್ಥವಾದ ಅವಕಾಶಗಳನ್ನು ನೀಡುವ ಸಂವಿಧಾನ ನಮ್ಮದು ಆಗಿರುವುದು ಹೆಮ್ಮೆ. ಈ ದಿನ, ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಪ್ರತಿಬಿಂಬಿಸಲು ಇರುವ ಸದವಕಾಶದ ದಿನದಂದೇ ಭಾವಿಸುತ್ತೇನೆ. ಕಾನೂನಿನ ದೃಷ್ಟಿಯಲ್ಲಿ ಎಲ್ಲ ಜನರ ಸಮಾನತೆಯನ್ನು ರಕ್ಷಿಸುವ ಮತ್ತು ದೇಶದ ಶಾಂತಿ ಕಾಪಾಡುವ ಅಂಶಗಳು ನಮಗೆ ನಾವೇ ಅರ್ಪಿಸಿಕೊಂಡು ಬಂದ ಭಾರತದ ನಮ್ಮ ಸಂವಿಧಾನದಲ್ಲಿದೆ ಎಂದು ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ ಕರೆಣ್ಣವರ ಮಾತನಾಡಿ, ಲೋಕ್ ಅದಾಲತ್ತಿನಲ್ಲಿ ದಾಖಲೆ ಪ್ರಮಾಣದಲ್ಲಿ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗಿದೆ. ಇದಕ್ಕೆಲ್ಲ ವಕೀಲರ ಸಹಕಾರವೇ ಕಾರಣ. ಕಕ್ಷಿದಾರನಿಗೆ ಮನವೊಲಿಸಿ ರಾಜೀ ಸಂಧಾನದ ಮೂಲಕ ಎಲ್ಲರೂ ಉತ್ತಮವಾಗಿ ಕಾರ್ಯ ನಿರ್ವಹಿಸಿದ್ದಾರೆ. ಕಾನೂನು ಸೇವಾ ಪ್ರಾಧಿಕಾರದ ಮೂಲಕ ಲೋಕ್ ಅದಾಲತ್ತಿನಲ್ಲಿ ಇತ್ಯರ್ಥ ಮಾಡಿಕೊಂಡ ಪ್ರಕರಣಗಳ ಕುರಿತು ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಪ್ರಶಂಸೆ ವ್ಯಕ ಪಡಿಸಿದ್ದಾರೆ. ಕಾರಣ ಇನ್ನೂ ಹೆಚ್ಚಿನ ಪ್ರಕರಣಗಳನ್ನು ಬಗೆಹರಿಸಿ ಕೊಂಡು ನಮ್ಮ ದಾಖಲೆಯನ್ನು ನಾವೇ ಮುರಿಯಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ದಾವಣಗೆರೆ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಹೆಚ್.ಅರುಣ್ ಕುಮಾರ್ ಮಾತನಾಡಿ, ಶಾಸಕಾಂಗ, ನ್ಯಾಯಾಂಗ ಮತ್ತು ಕಾರ್ಯಾಂಗ ಸೇರಿ ಸಂವಿಧಾನದ ಪೀಠಿಕೆ ಓದುವ ದಿನ ಇದಾಗಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T